ಸಂಪುಟ : 9 ಸಂಚಿಕೆ 77 ಪುಟ : 4 ಬೆಲೆ: 3.00 ಗುರುವಾರ ಎಪ್ರಿಲ್ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 77 Pages : 4 Price : 3.00 Thursday April 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪತ್ರಿಕಾಗೋಷ್ಠಿಯಲ್ಲಿ ಪ್ರಧಾನಿ ಮೋದಿ ವಿರುದ್ಧ ಸಚಿವ ಎಚ್.ಕೆ. ಪಾಟೀಲ ವಾಗ್ದಾಳಿ

# ಸೋಲಿನ ಭೀತಿಯಿಂದ ಸಲ್ಲದ ಹೇಳಿಕೆ



ಪ್ರಧಾನಿ ಮೋದಿ ಅವರ ಹಿಂದೂಗಳ ತಾಳಿ ಕಿತ್ತು ಕೊಡುತ್ತಾರೆ ಎನ್ನುವ ಹೇಳಿಕೆಗೆ ಪ್ರಿಯಾಂಗಾ ಗಾಂಧಿ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ. ಸೋನಿಯಾ ಗಾಂಧಿ ಈ ದೇಶಕ್ಕಾಗಿ ತನ್ನ ತಾಳಿಯನ್ನು ಬಲಿ ಕೊಟ್ಟಿದ್ದಾರೆ. ಅಂತಹ ಕುಟುಂಬದ ಬಗ್ಗೆ ಪ್ರಧಾನಿ ಮೋದಿ ಅಪಹಾಸ್ಯ ಮಾಡುವ ಮುನ್ನ ಕನಿಷ್ಠ ವಿವೇಚನೆಯನ್ನೂ ಬಳಸದಿರುವುದು ಆಶ್ಚರ್ಯ ತರಿಸಿದೆ ಎಂದು ಎಚ್.ಕೆ. ಪಾಟೀಲ ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಿ ನರೇಂದ್ರ ಮೋದಿಯವರು ತಮ್ಮ ಪ್ರಚಾರ ಸಭೆಗಳಲ್ಲಿ, ಹಿಂದೂಗಳ ತಾಳಿ, ಸಿರಿವಂತರ ಆಸ್ತಿ ಕಿತ್ತುಕೊಂಡು ಮುಸ್ಲಿಂರಿಗೆ ನೀಡಲಾಗುತ್ತದೆ, ದಲಿತರ ಮೀಸಲಾತಿಯನ್ನು ಕಿತ್ತುಕೊಂಡು ಅಲ್ಪಸಂಖ್ಯಾತರಿಗೆ ಕೊಡಲಾಗುತ್ತಿದೆ ಎಂಬ ಮಾತುಗಳನ್ನಾಡುತ್ತಿದ್ದು, ಈ ಮಾತು ಶುದ್ಧ ಸುಳ್ಳು. ದೇಶದ ಪ್ರಧಾನಿಗೆ ಇಂಥ ಮಾತುಗಳು ಶೋಭೆ ತರುವುದಿಲ್ಲ. ಸುಳ್ಳು ಹಾಗೂ ದ್ವೇಷ ಭಾವನೆ ಉಂಟುಮಾಡುತ್ತಿರುವ ಪ್ರಧಾನಿ ಮೋದಿ ವಿರುದ್ಧ ಚುನಾವಣೆ ಆಯೋಗ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ ಚುನಾವಣೆ ಪ್ರಚಾರ ಸಭೆಗಳಲ್ಲಿ ಹದ್ದುಮೀರಿ ಮಾತಾಡುತ್ತಿದ್ದಾರೆ. ವೃಥಾ ಸುಳ್ಳುಗಳನ್ನು ಹೇಳುತ್ತಾ ಜನರಲ್ಲಿ ದ್ವೇಷ ಭಾವನೆ ಮೂಡಿಸುತ್ತಿದ್ದಾರೆ. ಚುನಾವಣಾ ಆಯೋಗ ತಕ್ಷಣ ಅವರ ವಿರುದ್ಧ ಸುಮೋಟೊ ದೂರು ದಾಖಲಿಸಿಕೊಂಡು ಅವರನ್ನು ಚುನಾವಣೆ ಕಣದಿಂದ ಅನರ್ಹಗೊಳಿಸಬೇಕು ಎಂದು ಹೇಳಿದರು.

ಭಾರತ ಮಾತೆಯ ಆಭರಣಗಳಂತಿದ್ದ ರೈಲ್ವೆ, ವಿಮಾನ ನಿಲ್ದಾಣ, ಹೆದ್ದಾರಿ, ವಿದ್ಯುತ್, ಗ್ಯಾಸ್ , ಆಟದ ಮೈದಾನಗಳನ್ನು ದೋಚಿ ಅದಾನಿ, ಅಂಬಾನಿ ಮತ್ತು ಗುಜರಾತಿನ ವ್ಯಾಪಾರಿಗಳ ಪಾಲು ಮಾಡಿದವರು, ದಲಿತರ ಮೀಸಲಾತಿಯನ್ನು ಕಿತ್ತುಕೊಳ್ಳುವಂಥ ಸುಳ್ಳು ಹೇಳಿಕೆ ನೀಡುವ ಅವಶ್ಯಕತೆಯಿತ್ತಾ ಎಂದು ಪ್ರಶ್ನಿಸಿದ ಅವರು, ದೇಶದಲ್ಲಿ ಯಾವುದೇ ಕಾರಣಕ್ಕೂ ದಲಿತರ ಮೀಸಲಾತಿಯನ್ನು ಕಿತ್ತುಕೊಳ್ಳಲು ಸಾಧ್ಯವಿಲ್ಲ. ದಲಿತರು ಸದ್ಯ ಕಾಂಗ್ರೆಸ್ ಪರವಾಗಿದ್ದಾರೆ ಎನ್ನುವ ಕಾರಣಕ್ಕೆ ಸೋಲಿನ ಹತಾಶೆಯಿಂದ ಮೋದಿ ಇಲ್ಲಸಲ್ಲದ ಹೇಳಿಕೆ ನೀಡುತ್ತಿದ್ದಾರೆ ಎಂದು ಎಚ್.ಕೆ. ಪಾಟೀಲ ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಜಿ.ಎಸ್ ಪಾಟೀಲ, ಬಸವರಾಜ್ ಕಡೆಮನಿ, ವಿ.ಬಿ. ಸೋಮನಕಟ್ಟಿಮಠ, ಉಮರ್ ಫಾರೂಕ್ ಹುಬ್ಬಳ್ಳಿ ಉಪಸ್ಥಿತರಿದ್ದರು.

ಇಂದು ಗಜೇಂದ್ರಗಡಕ್ಕೆ ಸಿಎಂ ಸಿದ್ದರಾಮಯ್ಯ | ಪತ್ರಿಕಾಗೋಷ್ಠಿಯಲ್ಲಿ ಶಾಸಕ ಜಿ.ಎಸ್. ಪಾಟೀಲ ಮಾಹಿತಿ

## ಕ್ಷೇತ್ರದಲ್ಲಿ ಕಾಂಗ್ರೆಸ್ ಪರ ವಾತಾವರಣ

ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಗದಗದಲ್ಲಿ ನಡೆದ ನಾಲ್ಕು ಜನರ ಕೊಲೆ ಪ್ರಕರಣವನ್ನು ಸರಕಾರ ಮತ್ತು ಜಿಲ್ಲಾ ಪೊಲೀಸ್ ಇಲಾಖೆ ತೀವ್ರಗತಿಯಲ್ಲಿ ತನಿಖೆ ನಡೆಸಿ 8 ಜನರನ್ನು ಬಂಧಿಸಿದೆ. ಪೊಲೀಸರ ಕಾರ್ಯಕ್ಕೆ ಅಭಿನಂದನೆಗಳು. ಗದಗ-ಬೆಟಗೇರಿ ಅವಳಿ ನಗರದಲ್ಲಿ ಅಳವಡಿಸಿರುವ ಥರ್ಡ್ ಐ ಕೊಟ್ಟಿರುವ ಪುರಾವೆಗಳಿಂದ ತಪ್ಪಿತಸ್ಥರನ್ನು ಪತ್ತೆ ಹಚ್ಚಲು ಸಾಧ್ಯವಾಗಿದೆ ಎನ್ನುವುದು ಗಮನಕ್ಕೆ ಬಂದಿದೆ ಎಂದರು.



■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಗಜೇಂದ್ರಗಡದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಏ.25ರಂದು ಮಧ್ಯಾಹ್ನ 2.45ಕ್ಕೆ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಪ್ರಚಾರ ನಡೆಸಲಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಸಚಿವ ಶಿವಾನಂದ ಪಾಟೀಲ ಸೇರಿದಂತೆ ಅನೇಕ ನಾಯಕರು ಆಗಮಿಸಲಿದ್ದಾರೆ ಎಂದು ಕಾಂಗ್ರೆಸ್ ಜಿಲ್ಲಾಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಬುಧವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಾವೇರಿ-ಗದಗ ಲೋಕಸಭೆ ಕ್ಷೇತ್ರದಲ್ಲಿ ಕಾಂಗ್ರೆಸ್ ಪರ ವಾತಾವರಣವಿದೆ. ಈ ಹಿಂದಿನ ಎರಡು ಲೋಕಸಭೆ ಚುನಾವಣೆಯನ್ನು ಗಮನಿಸಿದರೆ, ಈ ಬಾರಿ ಜನ ಬದಲಾವಣೆ ಬಯಸಿದ್ದಾರೆ. ಈಗಿನ ಲೆಕ್ಕಾಚಾರದ ಪ್ರಕಾರ ಆನಂದ ಗಡ್ಡದೇವರಮಠ ಅವರು 1 ಲಕ್ಷ ಮತಗಳ ಅಂತರಿಂದ ಗೆಲವು ಸಾಧಿಸುವ ವಿಶ್ವಾಸವಿದೆ. ಆ ನಿಟ್ಟಿನಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಕಾಂಗ್ರೆಸ್ ಮುಖಂಡರು. ಕಾರ್ಯಕರ್ತರು ನಿರಂತರವಾಗಿ ಶ್ರಮಿಸುತ್ತಿದ್ದಾರೆ ಎಂದರು.

ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರಿಗೆ ಜಿಲ್ಲೆಯ ನೀರಾವರಿ ಸಮಸ್ಯೆ ಪರಿಹರಿಸುವ ಅವಕಾಶವಿತ್ತು. ಮಹದಾಯಿ, ಕೃಷ್ಣಾ ಬಿ ಸ್ಕೀಂ ಜಾರಿಗೊಳಿಸಲು ಹೋರಾಟ ಮಾಡಿದರು. ಅಧಿಕಾರ ಸಿಕ್ಕಾಗ ಆ ಯೋಜನೆಗಳನ್ನು ಕೈಗೆತ್ತಿಕೊಳ್ಳಲಿಲ್ಲ. ಈಗ ಅದೇ ಜನರ ಮುಂದೆ ಮತ ಕೇಳುತ್ತಿದ್ದಾರೆ. ಈ ಬಾರಿ ಜನ ಅವರಿಗೆ ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ವಿ.ಬಿ. ಸೋಮನಕಟ್ಟಿ, ಬಿ.ಬಿ. ಅಸೂಟಿ, ಬಸವರಾಜ ಕಡೆಮನಿ, ಅಶೋಕ ಮಂದಾಲಿ, ಉಮರ್ ಫಾರೂಕ್ ಹುಬ್ಬಳ್ಳಿ ಉಪಸ್ಥಿತರಿದ್ದರು.

## ಪತ್ರಿಕಾಗೋಷ್ಠಿಯಲ್ಲಿ ಯುವ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ಮಾಹಿತಿ

# 'ಯುವ ಚೈತನ್ಯ ಸಮಾವೇಶ' ಏ.28ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಏಪ್ರಿಲ್ 28ರ ಸಂಜೆ 4 ಗಂಟೆಗೆ ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ 'ಯುವ ಚೈತನ್ಯ ಸಮಾವೇಶ' ಹಮ್ಮಿಕೊಳ್ಳಲಾಗಿದೆ ಎಂದು ಯುವ ಕಾಂಗ್ರೆಸ್ ಸಮಿತಿ ಪ್ರಧಾನ ಕಾರ್ಯದರ್ಶಿ ಕೃಷ್ಣಗೌಡ ಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಲೋಕಸಭಾ ಚುನಾವಣೆಯಲ್ಲಿ ಯುವಕರ ಪಾಲ್ಗೊಳ್ಳುವಿಕೆ ಅತಿ ಮುಖ್ಯವಾಗಿದೆ. ಈ ಹಿನ್ನೆಲೆಯಲ್ಲಿ ಯುವಕರನ್ನು ರಾಜಕೀಯವಾಗಿ ಜಾಗೃತಗೊಳಿಸುವುದು ಮತ್ತು ಅವರಲ್ಲಿ ನಾಯಕತ್ವ ಗುಣಗಳನ್ನು ಬೆಳೆಸುವ



ಉದ್ದೇಶದೊಂದಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಬಿಜೆಪಿ ವಾರ್ಷಿಕ ಎರಡು ಕೋಟಿ ಉದ್ಯೋಗ ಸೃಷ್ಟಿಸುವ ಭರವಸೆ ನೀಡಿ ಎಡವಿದೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಯುವಕರಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಯುವಕರನ್ನು ಆರ್ಥಿಕವಾಗಿ ಸಬಲರನ್ನಾಗಿಸಲು 'ಯುವನಿಧಿ' ಯೋಜನೆ ಜಾರಿಗೆ ತಂದಿದ್ದಾರೆ. ಈ ಎಲ್ಲ ಯೋಜನೆಗಳನ್ನು ಯುವಕರಿಗೆ ಮುಟ್ಟಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಮುಖಂಡರಾದ ಬಸವರಾಜ ಕಡೆಮನಿ, ಸರ್ಫರಾಜ ಬಬರ್ಚಿ ಇತರರು ಉಪಸ್ಥಿತರಿದ್ದರು.

ಈ ಕಾರ್ಯಕ್ರಮದಲ್ಲಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್, ರಾಷ್ಟ್ರೀಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಶ್ರೀನಿವಾಸ್, ರಾಜ್ಯ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಹಮ್ಮದ್ ಹ್ಯಾರಿಸ್ ನಲಪಾಡ್ ಇನ್ನಿತರರು ಆಗಮಿಸಲಿದ್ದಾರೆ ಎಂದು ಕೃಷ್ಣಗೌಡ ಪಾಟೀಲ ಮಾಹಿತಿ ನೀಡಿದರು.

## ತೋಂಟದಾರ್ಯ ಜಾತ್ರಾ ಮಹೋತ್ಸವದ ಮಂಗಲ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜ. ತೋಂಟದಾರ್ಯ ಮಠದ 2024ನೇ ವರ್ಷದ ಜಾತ್ರಾ ಮಹೋತ್ಸವದ ಮಂಗಲೋತ್ಸವ ಏ. 25ರಂದು ಸಂಜೆ 7 ಗಂಟೆಗೆ ಜರುಗಲಿದೆ.

ದಿವ್ಯ ಸಾನ್ನಿಧ್ಯವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸುವರು. ಸಾನ್ನಿಧ್ಯವನ್ನು ನಾಗನೂರು ರುದ್ರಾಕ್ಷಿಮಠದ ಅಲ್ಲಮಪ್ರಭು ಮಹಾಸ್ವಾಮಿಗಳು, ಮಣಕವಾಡದ ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಯಶವಂತನಗರ ಸಿದ್ಧರಾಮೇಶ್ವರ ಮಠದ ಸಿದ್ಧರಾಮೇಶ್ವರ ಸ್ವಾಮಿಗಳು, ಹೈದ್ರಾಬಾದ್‌ನ ಶಿವಹಂಸಾರೂಢ ಸ್ವಾಮಿಗಳು ವಹಿಸುವರು.

ಜಡೆ ಸಿದ್ಧೇಶ್ವರ ಬಿಲ್ವಾಶ್ರಮ ಗಡಹಿಂಗ್ಲಜ್‌ನ ಮಹಾಂತ ಸಿದ್ಧೇಶ್ವರ ಸ್ವಾಮಿಗಳನ್ನು ನೂತನವಾಗಿ ಪೀಠಾಧಿಕಾರ ವಹಿಸಿಕೊಂಡ ನಿಮಿತ್ತ ಸಂಮಾನಿಸಲಾಗುವುದು. ಗಡಹಿಂಗ್ಲಜ್‌ದ ಬಿಲ್ವಾಶ್ರಮದ ಭಗಿನಿ ಮಂಡಳದ ತಾಯಂದಿರು ಅತಿಥಿಗಳಾಗಿ ಆಗಮಿಸುವರು. ಸಂಗೀತ ಕಲಾವಿದ ವೆಂಕಟೇಶ ಆಲ್ಕೋಡ ವಚನ ಸಂಗಿತ ನೆರವೇರಿಸುವರು ಎಂದು ತೋಂಟದಾರ್ಯ ಮಠದ ಜಾತ್ರಾ ಮಹೋತ್ಸವ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

॥ಶ್ರೀ ಗುರುಬಸವಲಿಂಗಾಯ ನಮಃ॥

ತ್ರಿವಿಧ ದಾಸೋಹಿ ಪೂಜ್ಯಶ್ರೀ ಜಗದ್ಗುರು ಲಿಂ.ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳ ದಿವ್ಯ ಪ್ರಕಾಶದಲ್ಲಿ ಶ್ರೀ ಮನ್ನಿರಂಜನ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಸನ್ನಿಧಿಯಲ್ಲಿ ಜರುಗುವ

ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ-2024

25-04-2024 ಗುರುವಾರ **ಮಂಗಲೋತ್ಸವ** ಸಂಜೆ 7-00 ಗಂಟೆಗೆ

ದಿವ್ಯಸಾನಿಧ್ಯ : ಶ್ರೀಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಯಡೆಯೂರು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ, ಡಂಬಳ-ಗದಗ

ಸಾನಿಧ್ಯ : ಪೂಜ್ಯ ಶ್ರೀ ಮ. ನಿ. ಪ್ರ. ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು ರುದ್ರಾಕ್ಷಿಮಠ, ನಾಗನೂರು ಬೆಳಗಾವಿ

ಪೂಜ್ಯ ಶ್ರೀ ಮ. ನಿ. ಪ್ರ. ಅಭಿನವ ಮೃತ್ಯುಂಜಯ ಮಹಾಸ್ವಾಮಿಗಳು ದೇವಮಂದಿರ ಮಹಾಮಠ, ಮಣಕವಾಡ

ಸಮ್ಮುಖ : ಪೂಜ್ಯ ಶ್ರೀ ಮ. ನಿ. ಪ್ರ. ಸಿದ್ಧರಾಮೇಶ್ವರ ಸ್ವಾಮಿಗಳು ಸಿದ್ಧರಾಮೇಶ್ವರಮಠ, ಯಶವಂತನಗರ

ಪೂಜ್ಯ ಶ್ರೀ ಶಿವ ಹಂಸಾರೂಢ ಸ್ವಾಮಿಗಳು, ಹೈದರಾಬಾದ್

ಗೌರವ ಸಂಮಾನ : ಪೂಜ್ಯ ಶ್ರೀ ಮ.ನಿ.ಪ್ರ. ಮಹಾಂತ ಸಿದ್ಧೇಶ್ವರ ಸ್ವಾಮಿಗಳು ಜಡೆಸಿದ್ಧೇಶ್ವರ ಬಿಲ್ವಾಶ್ರಮ, ಗಡಹಿಂಗ್ಲಜ (ನೂತನವಾಗಿ ಪೀಠಾಧಿಕಾರ ವಹಿಸಿಕೊಂಡ ಪ್ರಯುಕ್ತ)

ಅತಿಥಿಗಳು : ಗಡಹಿಂಗ್ಲಜ ಬಿಲ್ವಾಶ್ರಮದ ಭಗಿನೀಮಂಡಳದ ತಾಯಂದಿರು

ವಚನ ಸಂಗೀತ : ಪಂ. ವೆಂಕಟೇಶ ಅಲಕೋಡ, ಖ್ಯಾತ ಸಂಗೀತ ಕಲಾವಿದರು, ಗದಗ


ಶರಣರ ಬರವೆಮಗೆ ಪ್ರಾಣ ಜೀವಾಳವಯ್ಯ

: ಜಾತ್ರಾಮಹೋತ್ಸವ ಸಮಿತಿಯ ಪದಾಧಿಕಾರಿಗಳು :

ಅಧ್ಯಕ್ಷರು : ಪ್ರೊ.ಕೆ.ಎಚ್ ಬೇಲೂರ, ಉಪಾಧ್ಯಕ್ಷರು : ಶ್ರೀ ಅಮರೇಶ ಕ. ಚಾಗಿ, ಶ್ರೀಮತಿ ಶ್ರೀದೇವಿ ಎಸ್. ಶೆಟ್ಟರ್, ಶ್ರೀ ಶಿವಯ್ಯ ರಾ. ನಾಲತ್ವಾಡಮಠ ಕಾರ್ಯದರ್ಶಿ : ಶ್ರೀ ಪ್ರವೀಣ ಸ. ವಾರಕರ
ಸಹ ಕಾರ್ಯದರ್ಶಿಗಳು : ಶ್ರೀ ಗವಿಸಿದ್ಧಪ್ಪ ಶ. ಗಾಣಿಗೇರ, ಶ್ರೀ ಬರಕತಲಿ ಅ. ಮುಲ್ಲಾ, ಶ್ರೀ ಚಂದ್ರಶೇಖರ ಎಸ್. ಇಟಗಿ ಸಂಘಟನಾ ಕಾರ್ಯದರ್ಶಿ : ಶ್ರೀ ತಿಮ್ಮರೆಡ್ಡಿ ಹ. ಕೋನರಡಿ ಕೋಶಾಧ್ಯಕ್ಷರು : ಶ್ರೀ ವಿಶ್ವನಾಥ ಬ.ಹಳ್ಳಿಕೇರಿ
ಸಹ ಕೋಶಾಧ್ಯಕ್ಷರು : ಶ್ರೀ ಅಜಯ ಈ. ಮುನವಳ್ಳಿ

ಯಡೆಯೂರು ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2024
ಜಗದ್ಗುರು ತೋಂಟದಾರ್ಯ ಸಂಸ್ಥಾನಮಠ, ಗದಗ

## ಇಂದು ಪಟ್ಟಣಕ್ಕೆ ಸಿಎಂ ಸಿದ್ದರಾಮಯ್ಯ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ರೋಣ ರಸ್ತೆಯ ಎಪಿಎಂಸಿ ಎದುರಿನ ಪುರಸಭೆಯ ಬಯಲು ಜಾಗೆಯಲ್ಲಿ ಏ.25ರ ಮಧ್ಯಾಹ್ನ 2.45ಕ್ಕೆ ಹಾವೇರಿ-ಗದಗ ಲೋಕಸಭಾ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರವಾಗಿ ಮತಯಾಚಿಸಲು ಸಿಎಂ ಸಿದ್ದರಾಮಯ್ಯ ಆಗಮಿಸಲಿದ್ದಾರೆ ಎಂದು ಕಾಂಗ್ರೆಸ್ ಮುಖಂಡ ಸಿದ್ದಪ್ಪ ಬಂಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪಟ್ಟಣದ ಉಣಚಗೇರಿ ಗ್ರಾಮದ ಶರಣಬಸಪ್ಪ ಮೆಣಸಿನಾಯಿ ಅವರ ಜಮೀನಿನಲ್ಲಿ ನಿರ್ಮಿಸಲಾಗಿರುವ ಹೆಲಿಪ್ಯಾಡ್‌ನಲ್ಲಿ ಬಂದಿಳಿಯಲಿರುವ ಸಿಎಂ ಸಿದ್ದರಾಮಯ್ಯ ನೇರವಾಗಿ ಪಟ್ಟಣದ ಪುರಸಭೆಯ ಬಯಲು ಜಾಗೆಯಲ್ಲಿ ನಿರ್ಮಿಸಲಾಗಿರುವ ಬೃಹತ್ ವೇದಿಕೆಯಲ್ಲಿ ಮತಯಾಚಿಸಲಿದ್ದಾರೆ. ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ, ಶಿವಾನಂದ ಪಾಟೀಲ, ಶಾಸಕರಾದ ಜಿ.ಎಸ್. ಪಾಟೀಲ, ರುದ್ರಪ್ಪ ಲಮಾಣಿ, ಶಿವಣ್ಣವರ ಮಾಜಿ ಶಾಸಕ ಡಿ.ಆರ್. ಪಾಟೀಲ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಬಿ.ಆರ್. ಯಾವಗಲ್, ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯ ಪಕ್ಷದ ಪ್ರಮುಖರು ಹಾಗೂ ಮುಖಂಡರು ಭಾಗವಹಿಸಲಿದ್ದು, ಅಂದಾಜು 30 ಸಾವಿರ ಜನ ಸೇರುವ ನೀರಿಕ್ಷೆಯಿದೆ. ಹೀಗಾಗಿ ಅವಳಿ ತಾಲೂಕಿನ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಹಾಗೂ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹಾವೇರಿ - ಗದಗ ಲೋಕಸಭಾ ಚುನಾವಣೆಯ ಪ್ರಯುಕ್ತ ಬ್ಯಾಡಗಿ ಪಟ್ಟಣದ ಸಿದ್ದೇಶ್ವರ ಕಲ್ಯಾಣ ಮಂಟಪದಲ್ಲಿ ವರ್ತಕರ ಸಂಘದ ಅಧ್ಯಕ್ಷರು ಹಾಗೂ ಸರ್ವಸದಸ್ಯರೊಂದಿಗೆ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರು ಸಭೆ ನಡೆಸಿ, ಮತಯಾಚನೆ ನಡೆಸಿದರು. ಶಾಸಕ ಬಸವರಾಜ ಶಿವಣ್ಣನವರ, ಸಂಘದ ಅಧ್ಯಕ್ಷ ಸುರೇಶಗೌಡ ಪಾಟೀಲ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ ಉಪಾಧ್ಯಕ್ಷ ಎಸ್.ಆರ್.ಪಾಟೀಲ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ದಾನಪ್ಪ ಚೂರಿ, ಎಪಿಎಂಸಿ ನಿರ್ದೇಶಕ ಚಂದ್ರಪ್ಪ ಹುಲ್ಲತ್ತಿ, ಆರ್.ಕೆ.ಪಾಟೀಲ ಸೇರಿದಂತೆ ಇತರರಿದ್ದರು.

# ಡಾ. ರಾಜ್‌ಕುಮಾರ್ ಜನ್ಮ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಕರ್ನಾಟಕ ರತ್ನ ಡಾ.ರಾಜ್ ಕುಮಾರ್ ಅವರ ಜನ್ಮ ದಿನಾಚರಣೆಯನ್ನು ಗದಗ ನಗರ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಬುಧವಾರ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿ.ಪಂ.ಸಿಇಒ ಎಸ್.ಭರತ್ ಅವರು ಡಾ.ರಾಜ್‌ಕುಮಾರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ನಮನ ಸಲ್ಲಿಸಿದರು. ಡಾ.ರಾಜ್ ಕುಮಾರ್ ಅಭಿಮಾನಿಗಳು ಇದ್ದರು.

### ಕಾಂಗ್ರೆಸ್ ಸರ್ಕಾರದಲ್ಲಿ ಹೆಣ್ಣು ಮಕ್ಕಳ ಮಾನ, ಪ್ರಾಣಕ್ಕೆ ಬೆಲೆ ಇಲ್ಲ: ಬಸವರಾಜ ಬೊಮ್ಮಾಯಿ

# ರಾಹುಲ್ ಗಾಂಧಿ ಅಸಮರ್ಥ ನಾಯಕ



■ವಿಜಯಸಾಕ್ಷಿ ಸುದ್ದಿ, ಗದಗ

ರಾಹುಲ್ ಗಾಂಧಿ ಅತ್ಯಂತ ಅಸಮರ್ಥ ನಾಯಕ. ದೇಶದ ಬಗ್ಗೆ ವಿದೇಶದಲ್ಲಿ ಅವಮಾನಕರವಾಗಿ ಮಾತನಾಡುವ ನಾಯಕ, ಹೀಗಾಗಿ ಅವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಣೆ ಮಾಡುತ್ತಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಗದಗ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ರೋಣ ವಿಧಾನಸಭಾ ಕ್ಷೇತ್ರದ ಡಂಬಳದಲ್ಲಿ ನಡೆದ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದರು.

ಈ ಚುನಾವಣೆಯಲ್ಲಿ ನರೇಂದ್ರ ಮೋದಿ ಹಾಗೂ ರಾಹುಲ್ ಗಾಂಧಿ ನಡುವೆ ನಡೆಯುವ ಚುನಾವಣೆ. ರಾಹುಲ್ ಗಾಂಧಿ ಒಬ್ಬ ಅಸಮರ್ಥ ನಾಯಕರಾಗಿದ್ದು, ಅದೇ ಕಾರಣಕ್ಕೆ ಕಾಂಗ್ರೆಸ್ ಅವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಣೆ ಮಾಡುತ್ತಿಲ್ಲ. ನಾವು ಮೋದಿಯವರನ್ನು ಪ್ರಧಾನಿ ಅಭ್ಯರ್ಥಿ ಎಂದು ಘೋಷಣೆ ಮಾಡಿದ್ದೇವೆ. ಜನರು ಮೋದಿಯವರನ್ನು ಆಯ್ಕೆ ಮಾಡುತ್ತಾರೆ ಎಂದರು.

ಇಡೀ ದೇಶದಲ್ಲಿ ಮೋದಿ ಸುನಾಮಿ ಇದೆ. ಹಾವೇರಿ ಗದಗ ಲೋಕಸಭಾ ಕ್ಷೇತ್ರದಲ್ಲೂ ಮೋದಿಯವರ ಸುನಾಮಿ ಇದೆ. ದೇಶದ ಅತ್ಯಂತ ದಿಟ್ಟ ನಾಯಕ ನರೇಂದ್ರ ಮೋದಿ ಇದ್ದಾರೆ. ಇನ್ನೊಂದು ಕಡೆ ರಾಹುಲ್ ಗಾಂಧಿ ಪ್ರಧಾನಿ ಅಭ್ಯರ್ಥಿ ಅಂತ ಯಾಕೆ ಹೇಳುತ್ತಿಲ್ಲ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ನವರು ದೀನ ದಲಿತರಿಗೆ ನಿರಂತರ ಅನ್ಯಾಯ ಮಾಡುತ್ತ ಬಂದಿದ್ದಾರೆ. ಈ ದೇಶದ ದಲಿತರಿಗೆ ಅನ್ಯಾಯವಾಗಲು ಕಾಂಗ್ರೆಸ್ ಕಾರಣ. ಐವತ್ತು ವರ್ಷ ಆಳ್ವಿಕೆ ಮಾಡಿದ್ದೀರಿ ಅವರಿಗೆ ಏನು ಮಾಡಿದ್ದೀರಿ ಎಂದು ಪ್ರಶ್ನಿಸಿದರು.ರಾಜ್ಯ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕಾನೂನಿನ ಭಯ ಇಲ್ಲ. ಪೊಲೀಸ್ ಠಾಣೆಗಳಲ್ಲಿ ರಾಜ ಮರ್ಯಾದೆ ಸಿಗುತ್ತಿದೆ. ಬೆಳಗಾವಿಯಲ್ಲಿ ದಲಿತ ಮಹಿಳೆಯನ್ನು ನಗ್ನ ಮಾಡಿದರು. ಹಾವೇರಿಯಲ್ಲಿ ಮುಸ್ಲಿಂ ಮಹಿಳೆಯ ಮೇಲೆ ಆರು ಜನರು ಅತ್ಯಾಚಾರ ಮಾಡುತ್ತಾರೆ. ಅವರನ್ನು ರಕ್ಷಣೆ ಮಾಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಹಾಡು ಹಗಲೇ ಕಾಲೇಜು ವಿದ್ಯಾರ್ಥಿನಿಯನ್ನು ಕೊಲೆ ಮಾಡಿದ್ದರೆ, ಅದೊಂದು ಸಾಮಾನ್ಯ ಸಂಗತಿ ಅಂತ ಹೇಳುತ್ತಾರೆ. ಈ ಸರ್ಕಾರದಲ್ಲಿ ಹೆಣ್ಣು ಮಕ್ಕಳ ಮಾನ ಪ್ರಾಣಕ್ಕೆ ಬೆಲೆ ಇಲ್ಲದಂತಾಗಿದೆ ಎಂದರು.

ಲೋಕಸಭೆ ಚುನಾವಣೆ ನಂತರ ರಾಜ್ಯದಲ್ಲಿ ಮತ್ತೆ ಚುನಾವಣೆ ನಡೆಯುತ್ತದೆ. ಆಗ ಕಳಕಪ್ಪ ಬಂಡಿಯವರನ್ನು ಆಯ್ಕೆ ಮಾಡಿ ವಿಧಾನಸೌಧಕ್ಕೆ ಕಳಿಸಬೇಕು. ಕಳಕಪ್ಪ ಬಂಡಿಯವರೆ ಚುನಾವಣೆಗೆ ಸಿದ್ದರಾಗಿ ಎಂದು ಹೇಳಿದರು.

ಸಮಾವೇಶದಲ್ಲಿ ಮಾಜಿ ಸಚಿವ ಹಾಗೂ ಜೆಡಿಎಸ್ ನಾಯಕ ಬಂಡೆಪ್ಪ ಕಾಶಂಪೂರ್, ಕಳಕಪ್ಪ ಬಂಡಿ, ನಿವೃತ್ತ ಐಎಎಸ್ ಅಧಿಕಾರಿ ಸಿ. ಸೋಮಶೇಖರ್, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಮತ್ತಿತರರು ಹಾಜರಿದ್ದರು.

### ಮಲಪ್ರಭಾ ಯೋಜನೆ ಜಾರಿ

ಈ ಭಾಗದಲ್ಲಿ ಸಿಂಗಟಾಲೂರು ಏತ ನೀರಾವರಿ ಯೋಜನೆ ಜಾರಿ ಬಗ್ಗೆ ಕೆ ಸಿ ರೆಡ್ಡಿ ಸಮಿತಿ ಮಾಡಿ ವರದಿ ಪಡೆದುಕೊಂಡರು. ನಾವು 18 ಟಿಎಂಸಿ ನೀರು ಕೇಳಿದ್ದೇವು. ಅವರು 12 ಟಿಎಂಸಿ ನೀರು ಬಳಕೆ ಮಾಡಬಹುದಾಗಿದೆ ಎಂದು ಹೇಳಿದರು. ನಮ್ಮ ಕಾಲದಲ್ಲಿ 18 ಟಿಎಂಸಿ ನೀರು ಬಳಸಿಕೊಳ್ಳಲು 850 ಕೋಟಿ ರೂ. ವೆಚ್ಚದಲ್ಲಿ ಎರಡು ಲಕ್ಷ ಎಕರೆ ಜಮೀನು ನೀರಾವರಿ ಮಾಡಲಾಯಿತು. ಡಂಬಳ್ ಕೆರೆ ತುಂಬಿಸುವ ಕೆಲಸ ಮಾಡಿದ್ದೇನೆ. ನಾನು ಸಂಸದನಾಗಿ ಒಂದೂವರೆ ವರ್ಷದಲ್ಲಿ ಮಲಪ್ರಭಾ ಕಾಲುವೆಗೆ ನೀರು ಹರಿಸಿ ಕೆರೆ ತುಂಬಿಸುವ ಕೆಲಸ ಮಾಡಲಾಗುವುದು. ಕೊಪ್ಪಳದ ಗುಡ್ಡದ ಮಲ್ಲಾಪುರ ಯೋಜನೆಯಿಂದ ರೋಣ ತಾಲೂಕಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ ಎಂದರು.

ನಮಗೆ ಸುಳ್ಳು ಹೇಳುವ ಸಾಮರ್ಥ್ಯ ಇಲ್ಲ. ಜಾತಿ ಜಾತಿ ನಡುವೆ ಕಂದಕ ಸೃಷ್ಟಿಸುವ ಸಾಮರ್ಥ್ಯ ಇಲ್ಲ. ಕಿತ್ತೂರ ಕರ್ನಾಟಕ ಅಂತ ಘೋಷಣೆ ಮಾಡಿದ್ದು ಬಸವರಾಜ ಬೊಮ್ಮಾಯಿ, ಕಲ್ಯಾಣ ಕರ್ನಾಟಕ ಭಾಗಕ್ಕೆ ಐದು ಸಾವಿರ ಕೋಟಿ ರೂ. ಮೀಸಲಿಟ್ಟಿರುವುದು ನಾನು ಎಂದು ಬೊಮ್ಮಾಯಿ ಹೇಳಿದರು.

### ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರಿಂದ ಸಾರ್ವಜನಿಕರಿಗೆ ಮಾಹಿತಿ

# ಗುಡುಗು-ಸಿಡಿಲಿನಿಂದ ಎಚ್ಚರ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಗುಡುಗು ಮತ್ತು ಸಿಡಿಲು ಸಂದರ್ಭದಲ್ಲಿ ಸಂಭವಿಸಬಹುದಾದ ಹಾನಿಯಿಂದ ಸಂರಕ್ಷಣೆಗೆ ಅಗತ್ಯ ಕ್ರಮ ಅನುಸರಿಸಬೇಕು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

ಹೊರಗೆ ಹೋಗುವ ಅನಿವಾರ್ಯವಿದ್ದಲ್ಲಿ ಹವಾಮಾನ ಮುನ್ಸೂಚನೆ ಹಾಗೂ ಕಾಮನ್ ಅಲರ್ಟಿಂಗ್ ಪ್ರೊಟೊಕಾಲ್ (ಕ್ಯಾಪ್) ಮುಖಾಂತರ ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದಿಂದ ಬರುವ ಸಂದೇಶ ಗಮನಿಸಬೇಕು. ಪ್ರತಿಕೂಲ ಹವಾಮಾನದ ಸಮಯದಲ್ಲಿ ವಿಶೇಷವಾಗಿ ಕೃಷಿ ಕ್ಷೇತ್ರದಲ್ಲಿ ಕೆಲಸ ಮಾಡಲು, ಜಾನುವಾರುಗಳನ್ನು ಮೇಯಿಸಲು, ಮೀನುಗಾರಿಕೆ ಮತ್ತು ದೋಣಿಗಳನ್ನು ಓಡಿಸಲು ಅಥವಾ ಸಾಮಾನ್ಯ ಪ್ರಯಾಣಕ್ಕಾಗಿ ಮನೆಯಿಂದ ಹೊರಗೆ ಹೋಗದಿರುವುದು ಸೂಕ್ತ.

ಗುಡುಗು-ಸಿಡಿಲಿನ ಸಂದರ್ಭದಲ್ಲಿ ಲೋಹದ ತಗಡನ್ನು ಹೊದಿಸಿರುವ ಮನೆಗಳು ಸುರಕ್ಷಿತವಲ್ಲ. ಸುರಕ್ಷಿತವಾದ ಕಟ್ಟಡಗಳಾದ ಮನೆ, ಕಚೇರಿ, ಅಂಗಡಿ ಮತ್ತು ಕಿಟಕಿ ಮುಚ್ಚಿರುವ ವಾಹನಗಳಲ್ಲಿ ಆಶ್ರಯ ಪಡೆಯುವುದು. ಕೆರೆ ಮತ್ತು ನದಿಗಳು ಹಾಗೂ ಇನ್ನಿತರೆ ನೀರಿನ ಮೂಲಗಳಿಂದ ತಕ್ಷಣವೇ ದೂರವಿರುವುದು. ವಿದ್ಯುತ್ ಉಪಕರಣ ಹಾಗೂ ವಿದ್ಯುತ್ ಸರಬರಾಜು ಮಾರ್ಗ, ದೂರವಾಣಿ



ಸಂಪರ್ಕ, ಮೊಬೈಲ್ ಟವರ್, ಪವನ ವಿದ್ಯುತ್ ಗೋಪುರ ಹಾಗೂ ರೈಲು ಹಳಿಗಳಿಂದ ದೂರವಿರುವುದು.

ಗುಡುಗು-ಸಿಡಿಲಿನ ಮುನ್ಸೂಚನೆ ಅಥವಾ ಮುನ್ನೆಚ್ಚರಿಕೆ ಇದ್ದಲ್ಲಿ ಪ್ರಯಾಣ ಮುಂದೂಡುವುದು ಹಾಗೂ ಮನೆಯಲ್ಲೇ ಇರುವುದು. ವಾಹನ ಚಾಲನೆಯಲ್ಲಿದ್ದರೆ ತಕ್ಷಣವೇ ವಾಹನ ನಿಲ್ಲಿಸಿ ವಾಹನದಲ್ಲಿಯೇ ಆಶ್ರಯ ಪಡೆಯುವುದು ಅಗತ್ಯ ಎಂದು ತಿಳಿಸಿದ್ದಾರೆ.

ಮಿಂಚನ್ನು ಆಕರ್ಷಿಸುವಂತಹ ವಿದ್ಯುತ್, ಟೆಲಿಫೋನ್ ಕಂಬಗಳು ಅಥವಾ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಅರಣ್ಯ ಪ್ರದೇಶದಲ್ಲಿದ್ದರೆ ಸಣ್ಣ ಮರಗಳ ಕೆಳಗೆ ಆಶ್ರಯ ಪಡೆಯುವುದು. ಸಿಡಿಲು ಸಂದರ್ಭದಲ್ಲಿ ಮೊಬೈಲ್ ಫೋನ್‌ಗಳನ್ನು ಬಳಸಬಾರದು ಹಾಗೂ ವಿದ್ಯುತ್ ಸಂಪರ್ಕ ಹೊಂದಿರುವ ದೂರವಾಣಿಯನ್ನು ಬಳಸಬಾರದು.

ಮಕ್ಕಳು, ವಯೋವೃದ್ಧರು, ಜಾನುವಾರುಗಳನ್ನು ಹಾಗೂ ಸಾಕು ಪ್ರಾಣಿಗಳನ್ನು ಸುರಕ್ಷಿತ ಸ್ಥಳಗಳಲ್ಲಿ ಇರುವಂತೆ ಗಮನಹರಿಸುವುದು. ಸಿಡಿಲಿನ ಸಂದರ್ಭದಲ್ಲಿ ಕಟ್ಟಡದ ಕೊಳಾಯಿ ಮತ್ತು ಲೋಹದ ಕೊಳವೆಗಳ ಮೂಲಕ ವಿದ್ಯುತ್ ಹರಿಯುವ ಸಾಧ್ಯತೆ ಇರುವುದರಿಂದ ಈ ಸಂದರ್ಭದಲ್ಲಿ ಸ್ನಾನ ಅಥವಾ ಶವರ್ ತೆಗೆದುಕೊಳ್ಳಬಾರದು ಪಾತ್ರೆಗಳನ್ನು ತೊಳೆಯಬಾರದು, ಬಟ್ಟೆ ಒಗೆಯಬಾರದು.

ದೋಣಿ ವಿಹಾರ ಅಥವಾ ಈಜುತ್ತಿದ್ದರೆ ಸಾಧ್ಯವಾದಷ್ಟು ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆಯುವುದು. ಅರಣ್ಯ ಪ್ರದೇಶದಿಂದ ಗಿಡ-ಗಡ್ಡೆಗಳಿಲ್ಲದ ಸ್ವಚ್ಛ ಪ್ರದೇಶದ ಕಡೆಗೆ ಚಲಿಸುವುದು. ಮಿಂಚಿನ ಹೊಡೆತದಿಂದಾಗಿ ಕಾಡ್ಗಿಚ್ಚು ಸಂಭವಿಸುವ ಸಾಧ್ಯತೆಯಿದೆ. ಗುಡುಗು ಸಿಡಿಲಿನ ಸಮಯದಲ್ಲಿ ಬಯಲು ಪ್ರದೇಶದಲ್ಲಿ ಸಿಲುಕಿಕೊಂಡಿದ್ದರೆ, ತಕ್ಷಣವೇ ಹತ್ತಿರದಲ್ಲೇ ಇರುವ ಸುರಕ್ಷಿತ ಸ್ಥಳದಲ್ಲಿ ಆಶ್ರಯ ಪಡೆದು ಅಪಾಯದಿಂದ ಪಾರಾಗುವುದು.

ಮಿಂಚು ಬರುವ ಸಮಯದಲ್ಲಿ ರಬ್ಬರ್ ಸೋಲ್ ಇರುವ ಪಾದರಕ್ಷೆಗಳು ಮತ್ತು ಕಾರಿನ ಚಕ್ರಗಳು ಸುರಕ್ಷಿತವಲ್ಲದ ಕಾರಣ ಅವುಗಳಿಂದ ದೂರವಿರುವುದು. ವಿದ್ಯುತ್ ಸಂಪರ್ಕ ಹೊಂದಿರುವ ಕಂಪ್ಯೂಟರ್, ವಿಡಿಯೋ ಗೇಮ್ ಸಾಧನಗಳು, ಮೊಬೈಲ್ ಫೋನ್, ವಾಷಿಂಗ್ ಮಷಿನ್, ಸೈನ್ ಹಾಗೂ ಇತರ ವಿದ್ಯುತ್ ಉಪಕರಣಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸುವುದು.

ಆಘಾತಕ್ಕೊಳಗಾದ ವ್ಯಕ್ತಿಯಲ್ಲಿ ಉಸಿರಾಟವು ಕಂಡುಬರದಿದ್ದಲ್ಲಿ, ತಕ್ಷಣವೇ ಕೃತಕ ಉಸಿರಾಟ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ವ್ಯಕ್ತಿಯಲ್ಲಿ ಎದೆಬಡಿತವು ಕಂಡು ಬರದಿದ್ದಲ್ಲಿ ತಕ್ಷಣವೇ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಕಣ್ಣಿನ ದೃಷ್ಟಿ, ಕಿವಿ ಕೇಳಿಸುವಿಕೆ ಹಾಗೂ ಮೂಳೆಗಳ ಮುರಿದಿವೆಯೇ ಎಂದು ಪರೀಕ್ಷಿಸಬೇಕು. ಇದರಿಂದ ಪಾರ್ಶ್ವವಾಯು/ಲಕ್ವಾ ಹೊಡೆಯುವುದನ್ನು ಮತ್ತು ಅಧಿಕ ರಕ್ತಸ್ರಾವದಿಂದ ಉಂಟಾಗುವ ಅಪಾಯಗಳನ್ನು ತಡೆಗಟ್ಟಬಹುದು.

ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯು ವಿವಿಧ ರೀತಿಯ ಸುಟ್ಟ ಗಾಯಗಳಿಂದ ಬಳಲಬಹುದು ಹಾಗೂ ಕಾಣದ ಗಾಯಗಳು/ಆಘಾತಕ್ಕೆ ಒಳಗಾಗಿರಬಹುದು. ವ್ಯಕ್ತಿಯಲ್ಲಿ ಇಂತಹ ಲಕ್ಷಣಗಳಿದ್ದಲ್ಲಿ ಸೂಕ್ತ ಚಿಕಿತ್ಸೆಗಾಗಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕಳುಹಿಸಬೇಕು. ಸಿಡಿಲು ಬಡಿದಿರುವ ವ್ಯಕ್ತಿಯಿರುವ ಸ್ಥಳಕ್ಕೆ ತಲುಪಲು ಹಾಗೂ ಸಿಡಿಲು ಬಡಿತಕ್ಕೆ ಒಳಗಾದ ವ್ಯಕ್ತಿಯ ಆರೋಗ್ಯಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿ ನೀಡಬೇಕು ಮತ್ತು ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಿಡಿಲು/ಮಿಂಚು ಬಡಿದ ಸಮಯದಲ್ಲಿ ಪ್ರಾಥಮಿಕವಾಗಿ 112/108 ಸಹಾಯವಾಣಿಗೆ ಕರೆ ಮಾಡಬೇಕು. ವೈದ್ಯಕೀಯ ಸಿಬ್ಬಂದಿಯು ಆಗಮಿಸುವ ಮುನ್ನವೇ ಅಗತ್ಯ ಪ್ರಥಮ ಚಿಕಿತ್ಸೆಯಿಂದ ಸಿಡಿಲು/ಮಿಂಚಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಜೀವವನ್ನು ಉಳಿಸಬಹುದಾಗಿದೆ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯನ್ನು ಮುಟ್ಟಿ ಉಪಚರಿಸುವದರಿಂದ ಯಾವುದೇ ಅಪಾಯವಿರುವುದಿಲ್ಲ. ಸಿಡಿಲಿನ ಹೊಡೆತಕ್ಕೆ ಒಳಗಾದ ವ್ಯಕ್ತಿಯ ಉಸಿರಾಟ ಹಾಗೂ ಎದೆ ಬಡಿತವನ್ನು ಪರೀಕ್ಷಿಸಬೇಕು. ವ್ಯಕ್ತಿಯ ದವಡೆಗೆ ನೇರವಾಗಿ ಕುತ್ತಿಗೆಯಲ್ಲಿರುವ ರಕ್ತನಾಳವನ್ನು ಪರೀಕ್ಷಿಸುವುದರಿಂದ ಸುಲಭವಾಗಿ ನಾಡಿ ಮಿಡಿತವನ್ನು ತಿಳಿಯಬಹುದು.

### ಗ್ಯಾರಂಟಿ ಜಾರಿಯೇ ಬಿಜೆಪಿ ದ್ವೇಷಕ್ಕೆ ಕಾರಣ-ರಣದೀಪ್‌ಸಿಂಗ್ ಸುರ್ಜೆವಾಲ್

# ಕಮಲ ಪಾಳಯದ್ದು ಚೊಂಬು ಮಾಡೆಲ್

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಕರ್ನಾಟಕದಲ್ಲಿ ಈಗ ಎರಡು ಮಾಡೆಲ್‌ಗಳಿವೆ ಒಂದು ಕಾಂಗ್ರೆಸ್‌ನ ಗ್ಯಾರಂಟಿ ಮಾಡೆಲ್. ಇನ್ನೊಂದು ಬಿಜೆಪಿ ಚೊಂಬು ಮಾಡೆಲ್ ಎಂದು ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೆವಾಲ್ ಕಮಲ ಪಡೆಯನ್ನು ಗೇಲಿ ಮಾಡಿದರು.

ಖಾಲಿ ಚೆಂಬುಗಳನ್ನು ಮುಂದಿಟ್ಟುಕೊಂಡು ಸಚಿವ ಎಚ್. ಕೆ. ಪಾಟೀಲ, ವಿನಯ ಕುಲಕರ್ಣಿ, ಸಲೀಂ ಅಹ್ಮದ್, ಐ.ಜಿ.ಸನದಿ, ಬಸವರಾಜ ಶಿವಣ್ಣನವರ, ಜಿ.ಎಸ್.ಪಾಟೀಲ, ಯು.ಬಿ.ಬಣಕಾರ, ಶ್ರೀನಿವಾಸ ಮಾನೆ, ಪ್ರಕಾಶ ಕೋಳಿವಾಡ ಸೇರಿದಂತೆ ಅನೇಕ ನಾಯಕರ ಉಪಸ್ಥಿತಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು, ಬಿಜೆಪಿಯವರು ಗ್ಯಾರಂಟಿ ಕೊಡಲು ಆಗಲ್ಲಾ ಅಂದಿದ್ದರು. ನಾವು ಕೊಟ್ಟ ಮಾತಿನಂತೆ ಎಲ್ಲಾ ಗ್ಯಾರಂಟಿಗಳನ್ನು ಜನರಿಗೆ ಕೊಡುತ್ತಿದ್ದೇವೆ. ಅದಕ್ಕಾಗಿಯೇ ದೆಹಲಿಯ ಬಿಜೆಪಿ ನಾಯಕರು ಕರ್ನಾಟಕವನ್ನು ದ್ವೇಷಿಸುತ್ತಾರೆ ಹಾಗೂ ಕರ್ನಾಟಕದ ಜನರ ಬಳಿ ಸೇಡು ತೀರಿಸಿಕೊಳ್ಳುತ್ತಿದ್ದಾರೆಂದು



ಆರೋಪಿಸಿದರು.

ನಾವು ಬರ ಪರಿಹಾರ ಹಣ ಕೇಳುತ್ತಿದ್ದೇವೆ, ಹೊರತು ಯಾವುದೇ ಭಿಕ್ಷೆಯನ್ನು ಕೇಳುತ್ತಿಲ್ಲ. ಆದರೆ ದೇಶದ ರಕ್ಷಕರಾಗಿರುವ ಮೋದಿ ಮತ್ತು ಅಮಿತ್ ಶಾ ಖಾಲಿ ಚೊಂಬು ತೆಗೆದುಕೊಳ್ಳುತ್ತಿದ್ದು, ಪ್ರಸಕ್ತ ಚುನಾವಣೆಯಲ್ಲಿ ರಾಜ್ಯದ ಜನತೆ ತಕ್ಕ ಉತ್ತರ ನೀಡಲಿದ್ದಾರೆಂದರು.

ಇದು ಕನ್ನಡಿಗರನ್ನು ಕೆಣಕುವ ಪ್ರಯತ್ನ. ಹಾಗಾಗಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದ ಕೂಡಲೇ ಪ್ರಣಾಳಿಕೆಯಲ್ಲಿ ಘೋಷಿಸಿರುವಂತೆ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ರಾಜ್ಯಕ್ಕೆ ಆಗಿರುವ ಅನ್ಯಾಯವನ್ನು ಸರಿಪಡಿಸಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್. ಕೆ. ಪಾಟೀಲ, ಕೆಪಿಸಿಸಿ ಕಾರ್ಯಾಧ್ಯಕ್ಷ ವಿನಯ ಕುಲಕರ್ಣಿ, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹ್ಮದ್, ಮಾಜಿ ಸಂಸದರಾದ ಐ.ಜಿ.ಸನದಿ, ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಬಸವರಾಜ ಶಿವಣ್ಣನವರ, ಶಾಸಕರಾದ ಜಿ.ಎಸ್.ಪಾಟೀಲ, ಯು.ಬಿ.ಬಣಕಾರ, ಶ್ರೀನಿವಾಸ ಮಾನೆ, ಪ್ರಕಾಶ ಕೋಳಿವಾಡ, ಮಾಜಿ ಶಾಸಕರಾದ ಡಿ.ಆರ್.ಪಾಟೀಲ, ರಾಮಣ್ಣ ಲಮಾಣಿ, ಬಿ.ಎಚ್. ಬನ್ನಿಕೋಡ, ರಾಮಕೃಷ್ಣ ದೊಡ್ಡಮನಿ, ರಾಜ್ಯ ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸೋಮಣ್ಣ ಬೇವಿನಮರದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ರಾಜ್ಯ ಉಪಾಧ್ಯಕ್ಷ ಎಸ್.ಆರ್.ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಮಹದಾಯಿ ಯೋಜನೆಗೆ ಪರಿಸರ ಇಲಾಖೆ ಅನುಮತಿ ಕೊಡಿಸಿ ಎಂದು ಹಲವು ಬಾರಿ ಗೋಗರೆದರೂ ಚೊಂಬು ತೆಗೆದುಕೊಳ್ಳಿ ಎನ್ನುತ್ತಿದ್ದಾರೆ.

ಕೇಂದ್ರದಲ್ಲಿ ಅಸ್ತಿತ್ವದಲ್ಲಿರುವ ಬಿಜೆಪಿ ಸರ್ಕಾರವು ಕರ್ನಾಟಕಕ್ಕೆ ಸತತವಾಗಿ ಅನ್ಯಾಯವನ್ನು ಮಾಡುತ್ತ ಬಂದಿದ್ದು, ರಾಜ್ಯದ ಬಗ್ಗೆ ಅತೀವ ನಿರ್ಲಕ್ಷ್ಯ ತೋರಿದೆ ಎಂದು ರಣದೀಪ್‌ಸಿಂಗ್ ಸುರ್ಜೆವಾಲ್ ಆರೋಪಿಸಿದರು.

# ಸಂಭ್ರಮದ ಹನುಮ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಬ್ರಾಹ್ಮಣ ಸಮಾಜ ಸೇವಾ ಸಮಿತಿ ವತಿಯಿಂದ ಮಂಗಳವಾರ ಇಲ್ಲಿನ ಹಿರೇಬಜಾರದ ಮಾರುತಿ ದೇವರ ದೇವಸ್ಥಾನದಲ್ಲಿ ಹನುಮ ಜಯಂತಿ ಪ್ರಯುಕ್ತ ಸ್ವಾಮಿಗೆ ವಿಶೇಷ ಪೂಜೆಯೊಂದಿಗೆ ತೊಟ್ಟಿಲೋತ್ಸವ, ಬಳಿಕ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಸಂಭ್ರಮದಿಂದ ನಡೆಯಿತು.

ಸ್ಥಳೀಯ ಹಿರೇಅಗಸಿ ಬಳಿಯ ಹನುಮಾನ ದೇಗುಲದಲ್ಲಿ ಬೆಳಿಗ್ಗೆ ಹನುಮಾನ ಮೂರ್ತಿಗೆ ಪಂಚಾಮೃತ ಅಭಿಷೇಕ, ಚಂದನ ಅಭಿಷೇಕ ನೆರವೇರಿಸಿದರು. ವಿವಿಧ ಪರಿಮಳ ಪುಷ್ಪ, ವೀಳ್ಯದೆಲೆ ಹಾಗೂ ಚಿನ್ನದ ಆಭರಣಗಳಿಂದ ಶೃಂಗರಿಸಲಾಗಿತ್ತು. ಬಳಿಕ ಆಂಜನೇಯನ ಪಾಲಕಿ ಉತ್ಸವ ನಡೆಯಿತು. ದಿನಪೂರ್ತಿ ವಿಶೇಷ ಪೂಜಾ ಕೈಂಕರ್ಯಗಳು ಜರುಗಿದವು. ಬೆಳಿಗ್ಗೆಯಿಂದಲೇ ಮಕ್ಕಳು, ಮಹಿಳೆಯರು ತಂಡೋಪತಂಡವಾಗಿ ಹನುಮಂತ ದೇಗುಲಕ್ಕೆ ಆಗಮಿಸಿ ಹಣ್ಣು, ಕಾಯಿ, ಕರ್ಪೂರ ಅರ್ಪಿಸಿ ದೇವರ ದರ್ಶನ ಪಡೆದು ಪುನೀತರಾದರು.

ಈ ಸಂದರ್ಭದಲ್ಲಿ ರಘುನಾಥ ತಾಸಿನ, ಕೆ.ಸತ್ಯನಾರಾಯಣಭಟ್ಟ, ಶಶಿಧರ ಕುಲಕರ್ಣಿ, ಎಂ.ವಿ. ನಾಡಗೇರ, ರವಿ ಕುಲಕರ್ಣಿ, ಶಾರದಾ ತಾಸಿನ, ಸಂಧ್ಯಾ ಕುಲಕರ್ಣಿ, ರಾಧಾ ಉಟಗಿ, ಸವಿತಾ ಕೊಡಗಾನೂರ, ಲಕ್ಷ್ಮೀದೇವಿ ಕುಲಕರ್ಣಿ, ಲತಾ ರಾಜಪುರೋಹಿತ, ರಂಜಿತಾ ಕುಲಕರ್ಣಿ ಸೇರಿ ಇತರರು ಇದ್ದರು

## ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ


■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 26ರಂದು ಲೋಕಸಭಾ ಚುನಾವಣೆಗೆ ಮತದಾನ ನಡೆಯಲಿರುವ ಪ್ರಯುಕ್ತ ಮತದಾನಕ್ಕಾಗಿ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಕರಸಾ ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 80 ಹೆಚ್ಚುವರಿ ವಿಶೇಷ ಸಾರಿಗೆಗಳ ಕಾರ್ಯಾಚರಣೆ ಇದ್ದು, ಬೆಂಗಳೂರಿನಿಂದ ರಾಜ್ಯ/ಅಂತಾರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಎಪ್ರಿಲ್ 25 ಮತ್ತು ಏಪ್ರಿಲ್ 26 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸದರಿ ವಿಶೇಷ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ತೋಂಟದಾರ್ಯ ಮಠಕ್ಕೆ ಬಸವರಾಜ ಬೊಮ್ಮಾಯಿ ಭೇಟಿ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಬುಧವಾರ ಗದುಗಿನ ಶ್ರೀ ತೋಂಟದಾರ್ಯ ಮಠಕ್ಕೆ ಭೇಟಿ ನೀಡಿ ಮಠದ ಪೀಠಾಧಿಪತಿಗಳಾದ ತೋಂಟದ ಶ್ರೀ ಸಿದ್ದರಾಮ ಮಹಾಸ್ವಾಮೀಜಿಗಳ ಆಶೀರ್ವಾದ ಪಡೆದುಕೊಂಡರು. ನಂತರ ಮಠಕ್ಕೆ ಆಗಮಿಸಿದ್ದ ಭಕ್ತರೊಡನೆ ಕೆಲಹೊತ್ತು ಮಾತುಕತೆ ನಡೆಸಿ, ಪ್ರಧಾನಿ ಮೋದಿ ಅವರ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚಿಸಿ, ಚುನಾವಣೆಯಲ್ಲಿ ಎಲ್ಲರೂ ಪಾಲ್ಗೊಳ್ಳಬೇಕು. ನಿಮ್ಮ ಮತದಾನ ದೇಶದ ಭವಿಷ್ಯ



ನಿರ್ಮಾಣಕ್ಕೆ ಅತಿ ಮುಖ್ಯ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಕುಷ್ಟಗಿ ದೊಡ್ಡನಗೌಡರ, ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರಡಗಿ, ಮುಖಂಡರಾದ ಬಸವಣ್ಣೆಪ್ಪ ಚಿಂಚಲಿ, ಅಶೋಕ ಸಂಕಣ್ಣವರ, ಭದ್ರೇಶ ಕುಸಲಾಪುರ, ದ್ಯಾಮಣ್ಣ ನೀಲಗುಂದ, ಬೂದಪ್ಪ ಹಳ್ಳಿ, ಎಚ್.ಸಿ. ಮಂಜುನಾಥಸ್ವಾಮಿ, ಫಕ್ಕಿರೇಶ್ವ ರಟ್ಟಿಹಳ್ಳಿ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ರವಿಂದ್ರನಾಥ ದಂಡಿನ, ಕೆ.ಪಿ. ಕೋಟಿಗೌಡರ, ರಮೇಶ ಸಜ್ಜಾಗಾರ, ಅಮರನಾಥ ಬೆಟಗೇರಿ, ಅಮರನಾಥ ಗಡಗಿ, ಸುಧೀರ ಕಾಟಿಗಾರ, ವೆಂಕಟೇಶ ಹಬೀಬ, ಬಸವರಾಜ ಹಡಪದ, ಸಂತೋಷ ಮೇಲಗಿರಿ, ಗಂಗಾಧರ ಮೇಲಗಿರಿ, ಸುರೇಶ ಮರಳಪ್ಪನವರ, ಸುರೇಶ ಹೆಬಸೂರ, ಶಂಕರ, ಪಂಚಾಕ್ಷರಿ ಅಂಗಡಿ, ವಿನಾಯಕ ಹಬೀಬ, ಸಂತೋಷ ಅಕ್ಕಿ, ಟಿ.ಡಿ. ಪೂಜಾರ, ಬಾಗಪ್ಪ ವಗ್ಗರ, ಮಂಜುನಾಥ ಹಳ್ಳೂರಮಠ, ವಿಠ್ಠಲ ತೋಟದ, ಶರಣಪ್ಪ ಚಿಂಚಲಿ, ಪರಮೇಶ ನಾಯಕ, ಭೋಜಪ್ಪ ಲಮಾಣಿ, ಕುಮಾರ ಕಟ್ಟಿಮನಿ, ಮಂಜು ವಡ್ಡರ, ಮುತ್ತು ಇಟಗಿಮಠ, ಗಣೇಶ ಗಂಟಿ, ಶರಣಪ್ಪ ಚಿಂಚಲಿ, ಸುರೇಶ ಚವ್ಹಾಣ, ರಾಜೇಂದ್ರಪ್ರಸಾದ ಹೊಂಗಲ್ ಸೇರಿದಂತೆ ಕಾರ್ಯಕರ್ತರು ಇದ್ದರು.

# ಹನುಮ ಜಯಂತಿ ಆಚರಣೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಭೋಗೇರಿ ಓಣಿಯ ಹನುಮಾನ ದೇವಸ್ಥಾನದಲ್ಲಿ ಹನುಮ ಜಯಂತಿ ಅಂಗವಾಗಿ ಹನುಂತ ಮೂರ್ತಿಗೆ ವಿಶೇಷ ಪೂಜೆ, ಮಹಿಳೆಯರಿಂದ ತೊಟ್ಟಿಲೋತ್ಸವ ಕಾರ್ಯಕ್ರಮ ನೆರವೇರಿತು. ಆಗಮಿಸಿದ ಭಕ್ತಾದಿಗಳಿಗೆ ಅನ್ನಪ್ರಸಾದ ಸೇವೆ ಜರುಗಿತು.



ಮಾಹಾಂತಪ್ಪ ಪತ್ರಿ, ಮಾಹಾಂತೇಶ ಕೆಂಚನಾಯ್ಕರ್, ಕುಬೇರಪ್ಪ ಗಡಾದ, ಮಾಹಾಂತಪ್ಪ ಗಡಾದ, ಮಾಹಾಂತೇಶ ದರಿಯಪ್ಪನವರ, ಬಸವರಾಜ ಕಮ್ಮಾರ, ಶಿವಾನಂದ ಹುಣಶಿಮರದ, ಚಂದ್ರು ಡುಮ್ಮಿ ಸೇರಿದಂತೆ ಹನುಮಾನ ಸದ್ಭಕ್ತ ಮಂಡಳಿಯ ಸರ್ವ ಸದಸ್ಯರು ಇದ್ದರು.

## ಬಿಜೆಪಿ ಕಾರ್ಯಾಲಯ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ 31ನೇ ವಾರ್ಡ್‌ನ ಜೋಡ ಮಾರುತಿ ದೇವಸ್ಥಾನದ ಬಳಿ ಭಾಜಪ ಕಾರ್ಯಾಲಯವನ್ನು ಹನಮ ಜಯಂತಿ ಆಚರಣೆಯೊಂದಿಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಉದ್ಘಾಟಿಸಿದರು.

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ ಬೊಮ್ಮಾಯಿ ಮಾತನಾಡಿ, ದೇಶದ ಅಭಿವೃದ್ಧಿಗೆ ಪ್ರದಾನಿ ನರೇಂದ್ರ ಮೋದಿಯುವರ ನೇತೃತ್ವದ ಅಗತ್ಯವಿದ್ದು, ಅವರ ಕೈ ಬಲಪಡಿಸಲು ಮತ್ತೊಮ್ಮೆ ಅವರನ್ನು ಪ್ರದಾನಿ ಮಾಡಲು ಗದಗ-ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರಿಗೆ ಮತ ನೀಡುವ ಮೂಲಕ ಕೈಜೋಡಿಸಬೇಕೆಂದು ವಿನಂತಿಸಿದರು.

ನಗರಸಭಾ ಸದಸ್ಯೆ ಶೈಲಾ ಬಾಕಳೆ, ಹಿರಿಯರಾದ ಲೋಕನಾಥಸಾ ಬದಿ, ರಾಜ್ಯ ಓಬಿಸಿ ಕಾರ್ಯದರ್ಶಿ ಸುಧೀರ ಕಾಟಿಗರ, ಯುವ ಮುಖಂಡ ಶ್ರೀಕಾಂತ ಬಾಕಳೆ, ನಾಗರಾಜ ಖೋಡೆ, ನಾಸೀರ ನರೇಗಲ್, ಕುಮಾರ ಮಾರನಬಸರಿ, ಪರಶುರಾಮ ಮಿಸ್ಕಿನ್, ಕೃಷ್ಣಸಾ ಲದವಾ, ಸಂತೋಷ ಮೇಲಗಿರಿ, ಪ್ರಕಾಶ ಕಾಟಿಗರ, ರವಿ ಹಡಪದ, ರಾಜೇಶ ಖೋಡೆ, ತುಕಾರಾಮ ನಾಕೋಡ, ಮಯೂರ ಕಾಟಿಗರ, ಅನಿಲ್ ಬಸವಾ, ಕೌಶಲ್ಯಾಬಾಯಿ ಬದಿ, ಶೋಭಾ ಬಾಂಡಗೆ ಮುಂತಾದವರು ಉಪಸ್ಥಿತರಿದ್ದರು.

ಅವ್ವ ಸೇವಾ ಟ್ರಸ್ಟ್ ವತಿಯಿಂದ ಗುರವ್ವ ಹೊರಟ್ಟಿಯವರ ಸ್ಮರಣೆಗಾಗಿ ವಿಶೇಷ ಶಿವಾನುಭವ

# ತಾಯಿಯ ಸ್ಥಾನಕ್ಕೆ ಯಾರೂ ಸಾಟಿಯಿಲ್ಲ

**■ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಯಾವ ದೇಶದಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಮುಂದುವರೆದಿರುತ್ತಾರೋ ಆ ದೇಶ ಅಭಿವೃದ್ಧಿ ಪಥದತ್ತ ಸಾಗುವುದು ನಿಶ್ಚಿತ. ಜೊತೆಗೆ ಆ ದೇಶದಲ್ಲಿ ಶಾಂತಿ, ನೆಮ್ಮದಿ, ಸೌಹಾರ್ದತೆಯೊಂದಿಗೆ ಎಲ್ಲ ಸೌಭಾಗ್ಯಗಳನ್ನು ಕಾಣಲು ಸಾಧ್ಯ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಅವರು ಇಲ್ಲಿಯ ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಗುರವ್ವ ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣೆಗಾಗಿ ಸ್ಥಾಪಿಸಿದ ದತ್ತಿನಿಧಿ ಕಾರ್ಯಕ್ರಮದಲ್ಲಿ ಜಂಗಮ ಪುಂಗವ ಅಲ್ಲಮ ಪ್ರಭುಗಳ, ಅಕ್ಕಮಹಾದೇವಿ ಜಯಂತಿ ಮತ್ತು ಶ್ರೀಮಠದ 9ನೇ ಪೀಠಾಧಿಪತಿಗಳ 57ನೇ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಿ, ಕಳೆದ ಯುಪಿಎಸ್‌ಸಿ ಪರೀಕ್ಷೆಯಲ್ಲಿ ದೇಶಕ್ಕೆ 101ನೇ ಸ್ಥಾನ ಗಳಿಸಿದ ಹಾಗೂ ರಾಜ್ಯಕ್ಕೆ 2ನೇ ಸ್ಥಾನ ಪಡೆದ ಮುಧೋಳ ಗ್ರಾಮದ ಸೌಭಾಗ್ಯ ಬೀಳಗಿಮಠ ಹಾಗೂ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ ಅವರನ್ನು ಸನ್ಮಾನಿಸಿ ಮಾತನಾಡಿದರು.



ಒಬ್ಬ ತಾಯಿ ಮನೆಯಲ್ಲಿದ್ದರೆ ನೂರು ಶಾಲೆಗಳನ್ನು ತೆರೆದಷ್ಟು ಮಕ್ಕಳು ಸಂಸ್ಕಾರವಂತರಾಗುತ್ತಾರೆ. ತಾಯಿ ದೇವರಾಗಬಹುದು. ಆದರೆ ದೇವರು ತಾಯಿಯಾಗಲು ಸಾಧ್ಯವಿಲ್ಲ. ಈ ಸ್ಥಾನಕ್ಕೆ ಯಾರೂ ಸಮನಲ್ಲ. ನಮ್ಮನ್ನು ಹೊತ್ತು, ಹೆತ್ತು, ಸಾಕಿ, ಸಲುಹಿ ದೊಡ್ಡವರನ್ನಾಗಿ ಮಾಡಿದ ನಮ್ಮ ತಂದೆ-ತಾಯಿಯವರನ್ನು ನೋಯಿಸದೇ ಅವರ ಕೊನೆಗಾಲದಲ್ಲಿ ಪ್ರೀತಿ, ವಿಶ್ವಾಸ, ಗೌರವ ಆದರಾತಿಥ್ಯಗಳಿಂದ ನೋಡಿಕೊಳ್ಳಬೇಕು. ಮಹಿಳೆಯರು ಸಬಲರಾದರೆ ಸದೃಢ ದೇಶವನ್ನು ಕಟ್ಟಲು ಸಾಧ್ಯವಾಗುತ್ತದೆ. ಅಂತಹ ಸಾಧನೆ ಮಾಡಿದ ಸೌಭಾಗ್ಯ ಬೀಳಗಿಮಠ ಹಾಗೂ ಲತಾ ಮಲ್ಲಿಕಾರ್ಜುನ ಪ್ರತಿಯೊಬ್ಬ ಹೆಣ್ಣುಮಕ್ಕಳಿಗೂ ಮಾದರಿಯಾಗಿದ್ದಾರೆ. ಇವರ ಸಾಧನೆಯನ್ನು ಗೌರವಿಸಲು ಅವ್ವ ಸೇವಾ ಟ್ರಸ್ಟ್ ಬಳಗಕ್ಕೆ ಹೆಮ್ಮೆ ಎನಿಸುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಹರಪನಹಳ್ಳಿ ಶಾಸಕಿ ಲತಾ ಮಲ್ಲಿಕಾರ್ಜುನ, ಶಶಿ ಸಾಲಿ, ನಿವೃತ್ತ ಪ್ರಾಚಾರ್ಯ ಕರಿಭರಮಗೌಡರ, ಡಾ.ಬಸವರಾಜ ಧಾರವಾಡ ಮುಂತಾದವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಅಳವಂಡಿ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಮಹಾಲಿಂಗ ಸ್ವಾಮೀಜಿ, ಕರಬಸಪ್ಪ ಹಂಚಿನಾಳ, ಆರ್.ಬಿ. ಡಂಬಳಮಠ, ವೀರನಗೌಡ ಗುಡದಪ್ಪನವರ, ಆರ್.ಎಲ್. ಪೊಲೀಸ್‌ಪಾಟೀಲ, ಎಸ್.ಎಂ. ಅಗಡಿ, ಎಸ್.ಎಸ್. ಗಡ್ಡದ, ಎಸ್.ಪಿ. ನಿಂಬಿಮಠ, ಎಮ್.ಎಸ್. ಪೂಜಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಡಾ. ಬಿ.ಜಿ. ಜವಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಸ್.ಎಸ್. ಇನಾಮತಿ ನಿರೂಪಿಸಿದರು.

ಸಾನ್ನಿಧ್ಯ ವಹಿಸಿದ್ದ ಜ.ನಾಡೋಜ ಡಾ.ಅನ್ನದಾನೀಶ್ವರ ಸ್ವಾಮೀಜಿ ಮಾತನಾಡಿ, ಶ್ರೀಮಠ ಸದಾ ಸಮಾಜಮುಖಿಯಾಗಿ ಸೇವೆ ಮಾಡುವ ಮೂಲಕ ಸಮಾಜದ ಒಳಿತಿಗಾಗಿ ಹಗಲಿರುಳು ಶ್ರಮಿಸುತ್ತಿದೆ. ವಿಶೇಷವಾಗಿ ಕಳೆದ 2 ವರ್ಷಗಳಿಂದ ಮಾತೋಶ್ರೀ ಗುರಮ್ಮ ಶಿವಲಿಂಗಪ್ಪ ಹೊರಟ್ಟಿಯವರ ಹೆಸರಿನಲ್ಲಿ ವಿಶೇಷ ಶಿವಾನುಭವ ಆಚರಿಸುತ್ತಿರುವುದು ನಮಗೂ, ನಮ್ಮ ಮಠಕ್ಕೂ ಹೆಮ್ಮೆಯ ಸಂಗತಿ ಎಂದು ಹೇಳಿದರು.

## ಬೊಮ್ಮಾಯಿ ಪ್ರಚಾರಕ್ಕೆ ಜೆಡಿಎಸ್ ಸಾಥ್



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಜೆಡಿಎಸ್ ಮುಖಂಡ, ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಆಪ್ತ ಗಂಗಾಧರ ಹೊಂಬಾಳಿಮಠ ನೇತೃತ್ವದಲ್ಲಿ ಜೆಡಿಎಸ್ ಕಾರ್ಯಕರ್ತರು ಬಸವರಾಜ ಬೊಮ್ಮಾಯಿ ಅವರನ್ನು ಸ್ವಾಗತಿಸಿ, ಬೆಂಬಲ ವ್ಯಕ್ತಪಡಿಸಿದರು.

ಶಿರಹಟ್ಟಿ ವಿಧಾನಸಭಾ ಮತಕ್ಷೇತ್ರದಲ್ಲಿ ಪ್ರತಿ ಮನೆಗೆ ತೆರಳಿ, ಬಿಜೆಪಿ-ಜೆಡಿಎಸ್ ಮೈತ್ರಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರನ್ನು ಅಧಿಕ ಮತಗಳಿಂದ ಆಯ್ಕೆ ಮಾಡುವಂತೆ ಮತದಾರರಲ್ಲಿ ವಿನಂತಿಸಿಕೊಳ್ಳಲಾಗುತ್ತಿದೆ. ಬಸವರಾಜ ಬೊಮ್ಮಾಯಿ ಅವರು ಮುಖ್ಯಮಂತ್ರಿ ಇದ್ದಾಗ ಹಾಗೂ ನೀರಾವರಿ ಇಲಾಖೆ ಸಚಿವರಿದ್ದಾಗ ಶಿರಹಟ್ಟಿ ವಿಧಾನಸಭಾ ಕ್ಷೇತ್ರಕ್ಕೆ ಶಿರಹಟ್ಟಿ ಆಸ್ಪತ್ರೆ ಮೇಲ್ದರ್ಜೆಗೆ 100 ಕೋಟಿ ರೂ., ಗದಗನಿಂದ ಹೊನ್ನಾಳಿವರೆಗೆ ದ್ವಿಪಥ ರಸ್ತೆ ಅಭಿವೃದ್ಧಿಗೆ ಆರ್ಥಿಕ ನೆರವು ನೀಡುವುದರ ಜತೆಗೆ ಕ್ಷೇತ್ರದ ಅನೇಕ ಮಠಗಳಿಗೆ ಆರ್ಥಿಕ ಸಹಾಯ ನೀಡಿ, ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಕ್ಷೇತ್ರದ ಮತದಾರರು ಲೋಕಸಭಾ ಚುನಾವಣೆಯಲ್ಲಿ ಮತದಾನ ಮಾಡುವ ಮೂಲಕ ಕ್ಷೇತ್ರದಲ್ಲಿ ಮತ್ತೆ ಅಭಿವೃದ್ಧಿ ಪರ್ವ ಆರಂಭವಾಗುವುದಕ್ಕೆ ಬೊಮ್ಮಾಯಿ ಅವರನ್ನು ಬೆಂಬಲಿಸಬೇಕೆಂದರು.

ಈ ಸಂದರ್ಭದಲ್ಲಿ ಶಾಸಕ ಡಾ.ಚಂದ್ರು ಲಮಾಣಿ, ಶಿರಹಟ್ಟಿ ಮಂಡಳ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಶಿರಹಟ್ಟಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ಅಧ್ಯಕ್ಷ ಸಿದ್ದಲಿಂಗಯ್ಯ ಹೊಂಬಾಳಿಮಠ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಶಿವಲಿಂಗಪ್ಪ ಜಕ್ಕಲಿ, ಷಣ್ಮುಖಪ್ಪ ಕೊರಡೂರ, ವೆಂಕಟೇಶ ಜಕ್ಕಲಿ, ದಿಂಗಾಲಯ್ಯ ಹಿರೇಮಠ ಸೇರಿ ಅನೇಕರಿದ್ದರು.

## ಅಕ್ಕಮಹಾದೇವಿ ಮನುಕುಲಕ್ಕೆ ಮಾದರಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವೈರಾಗ್ಯದ ಪ್ರತೀಕವಾಗಿರುವ ಮಹಾನ್ ಶರಣೆ ಅಕ್ಕಮಹಾದೇವಿ ಮಹಿಳೆಯರಿಗೆ ಮಾತ್ರವಲ್ಲದೇ, ಇಡೀ ಮನುಕುಲಕ್ಕೆ ಮಾದರಿಯಾಗಿದ್ದಾರೆ ಎಂದು ಪ.ಪಂ ಮುಖ್ಯಾಧಿಕಾರಿ ನಾಗಭೂಷಣ ಎನ್ ಹೇಳಿದರು.

ಇಲ್ಲಿನ ಪ.ಪಂ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಅಕ್ಕಮಹಾದೇವಿ ಜಯಂತಿ ಸಮಾರಂಭದಲ್ಲಿ ಅವರು ಮಾತನಾಡಿರು.

ಸಮಾಜದಲ್ಲಿ ಮಹಿಳೆಯರಿಗೂ ಪುರುಷರಷ್ಟೇ ಸರಿಸಮಾನ ಸ್ಥಾನಮಾನ ಕಲ್ಪಿಸಬೇಕೆಂದು 12ನೇ ಶತಮಾನದಲ್ಲಿಯೇ ಹೋರಾಟ ಮಾಡಿದ ಧೀರ ವನಿತೆ ಅಕ್ಕಮಹಾದೇವಿಯು ಇಂದಿನ ಮಹಿಳೆಯರ ಬದುಕಿಗೆ ಆದರ್ಶಪ್ರಾಯ. ಸಾಮಾನ್ಯ ಕುಟುಂಬದಿಂದ ಜನಿಸಿದ ಅಕ್ಕಮಹಾದೇವಿಯು ಚಿಕ್ಕ ವಯಸ್ಸಿನಲ್ಲಿಯೇ ರಾಜನನ್ನು ಮದುವೆಯಾಗಿ ವೈಭೋಗದ ಜೀವನ ಬಿಟ್ಟು ಸಮಾಜದಲ್ಲಿದ್ದ ದೇವದಾಸಿ, ವಿಧವಾ ವಿವಾಹ ಪದ್ಧತಿ, ಸತಿ ಸಹಗಮನ ಪದ್ಧತಿಗಳಂತಹ ಅನಿಷ್ಟಗಳನ್ನು ಹೋಗಲಾಡಿಸಲು ಕಲ್ಯಾಣ ಕ್ರಾಂತಿಯ ಮೂಲಕ ಹೋರಾಟಕ್ಕಿಳಿದರು. ವಚನ ಸಾಹಿತ್ಯದ ಪ್ರಮುಖರಲ್ಲೊಬ್ಬರಾದ ಅಕ್ಕಮಹಾದೇವಿ ಕನ್ನಡದ ಪ್ರಥಮ ಮಹಿಳಾ ಕವಿಯತ್ರಿಯಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಎಂ.ಎಚ್. ಸೀತಿಮನಿ, ರಮೇಶ ಹಲಗಿ, ಆರೀಫ್ ಮಿರ್ಜಾ, ಮುತ್ತಣ್ಣ ಮೆಣಸಗಿ, ಉದಯ ಮುದೇನಗುಡಿ, ಮಹಾದೇವ ಮ್ಯಾಗೇರಿ, ಎನ್.ಬಿ. ಬೇಲೇರಿ, ಕಾವ್ಯಾ ಅರವಟಗಿಮಠ, ಪಿ.ಜಿ. ರಾಂಪೂರ, ಫಕ್ಕೀರೇಶ ತಮ್ಮಣ್ಣವರ, ಸಿ.ವಿ. ಹೊನವಾಡ, ರಕ್ಷೀತ ಮುಟಗಾರ, ಜೆ.ಡಿ. ಬಂಕಾಪೂರ ಸೇರಿದಂತೆ ಪ.ಪಂ ಸಿಬ್ಬಂದಿಗಳು ಇದ್ದರು.



ಮುಳಗುಂದ ಪಟ್ಟಣದ ಅಲ್ಲಮ ಪ್ರಭುಸ್ವಾಮಿ ಜಾತ್ರಾ ಮಹೋತ್ಸವ ಸಕಲ ವಾದ್ಯ ಮೇಳಗಳೊಂದಿಗೆ ನೆರವೇರಿತು. ಅಲ್ಲಮ ಪ್ರಭುವಿನ ಪ್ರಭಾವಳಿ ಉತ್ಸವ, ಸಂಭ್ರಮದ ಕಡುಬಿನ ಕಾಳಗವನ್ನು ಸಿದ್ದರಾಮಯ್ಯ ಹಿರೇಮಠ ನೆರೆವೇರಿಸಿದರು.

## ಅಕ್ಕನ ಬಳಗದಲ್ಲಿ ನಾಲ್ಕನೇ ದಿನದ ಕಾರ್ಯಕ್ರಮ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಅಕ್ಕನ ಬಳಗದಲ್ಲಿ ಅಕ್ಕನ ಜಯಂತಿ ಉತ್ಸವದ ಅಂಗವಾಗಿ 4ನೇ ದಿನವಾದ ಮಂಗಳವಾರ ಅಕ್ಕಮಹಾದೇವಿಯನ್ನು ತೊಟ್ಟಲಿಗೆ ಹಾಕಿ ಹೆಸರಿಡುವ ಹಾಗೂ ಮುತ್ತೈಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು. ಉಡಿ ತುಂಬುವ ಸೇವೆಯನ್ನು ಅನುಪಮಾ ಅಮರೇಶ್ವರ ಮಾಳೆಕೊಪ್ಪಮಠ ವಹಿಸಿಕೊಂಡಿದ್ದರು.



ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷೆ ಅನ್ನಪೂರ್ಣ ಮಾಳೆಕೊಪ್ಪಮಠ, ಕಾರ್ಯದರ್ಶಿ ರೇಣುಕಾ ಎಲ್.ಅಮಾತ್ಯ, ಖಜಾಂಚಿ ಜಯಲಕ್ಷ್ಮೀ ವಿ.ಬಳ್ಳಾರಿ, ಟ್ರಸ್ಟಿಗಳಾದ ನಾಗರತ್ನ ಹುಬ್ಬಳ್ಳಿಮಠ, ಗೀತಾ ಮಾನ್ವಿ, ಶಶಿರೇಖಾ ಶಿಗ್ಲಿಮಠ, ಶಾರದಾ ಹಿರೇಮಠ, ಶಾಂತ ಸಂಕನೂರು, ಶಿವಲೀಲಾ ಕುರುಡಗಿ, ಸದಸ್ಯರಾದ ಪ್ರೀತಿ ಶಿವಪ್ಪನಮಠ, ಮಂಗಳ ನಲವತವಾಡಮಠ, ಶಿವಲೀಲಾ ಅಕ್ಕಿ, ಸುವರ್ಣ ಹೊಸಂಗಡಿ, ವಿದ್ಯಾ ತಡಿ. ಮಹಾಂತ ಹಿರೇಮಠ, ಖುಷಿ ಮುದೇಗಣ್ಣವರ, ಶಿವಲೀಲಾ ಹಿರೇಮಠ, ಶೋಭಾ ಪಟ್ಟಣಶೆಟ್ಟಿ, ಮಾಧುರಿ ಮಳೆಕೊಪ್ಪ, ಸುಜಾತ ಬಳ್ಳಾರಿ, ಕಮಲ ಭೂಮಾ, ಗಿರಿಜಾ ನಲವತವಾಡಮಠ, ಮಂಜುಳಾ ಹುಬ್ಬಳ್ಳಿಮಠ, ಪ್ರಭಾವತಿ ಯಳಮಲಿ ನಿರ್ಮಲ ಹುಬ್ಬಳ್ಳಿಮಠ, ಸುಜಾತಾ ಬಳ್ಳಾರಿ, ಲತಾ ಪತ್ತಾರ, ಶಿವಲೀಲಾ ಹಿರೇಮಠ ಶಕುಂತಲಾ ಉಪಸ್ಥಿತರಿದ್ದರು.

## ಪ್ರಜಾಪ್ರಭುತ್ವದ ಹಬ್ಬದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ದೇಶದಲ್ಲಿ ಅತೀ ದೊಡ್ಡ ಹಬ್ಬವೆಂದರೆ, ಎಲ್ಲರೂ ತಮ್ಮ ಹಕ್ಕನ್ನು ಚಲಾಯಿಸುವ ಮತದಾನದ ಹಬ್ಬ. ಡಾ. ಬಿ.ಆರ್. ಅಂಬೇಡ್ಕರ ಅವರು ನಮ್ಮ ದೇಶಕ್ಕೆ ನೀಡಿರುವ ಸಂವಿಧಾನದ ಮೂಲಕ ಪ್ರತಿಯೊಬ್ಬ ನಾಗರಿಕರು ಮತದಾನ ಮಾಡುವ ಹಕ್ಕನ್ನು ಪಡೆದುಕೊಂಡಿದ್ದಾರೆ. ಆದ್ದರಿಂದ ಈ ಹಬ್ಬದಲ್ಲಿ ಗದಗ-ಬೆಟಗೇರಿ ನಗರದ ಎಲ್ಲಾ ಸ್ಲಂ ನಿವಾಸಿಗಳು ಕಡ್ಡಾಯವಾಗಿ ಭಾಗವಹಿಸಬೇಕೆಂದು ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ರವಿಕುಮಾರ ಬೆಳಮಕರ ಹೇಳಿದರು.

ಅವರು ಗದಗ ನಗರದ ಆಕಾಶನಗರ ಸ್ಲಂ ಪ್ರದೇಶದಲ್ಲಿ ಲೋಕಸಭೆ ಚುನಾವಣೆಯ ಜನಜಾಗೃತಿ ಆಂದೋಲನ ಸಭೆಯನ್ನು ಉದ್ದೇಶಿಸಿ ಮಾತನಾಡಿ, ನಮ್ಮ ದೇಶದ ಸಂವಿಧಾನದಲ್ಲಿ ನೀಡಿರುವ ಸಾಮಾಜಿಕ ನ್ಯಾಯ ಮತ್ತು ಸಮಾನತೆಯ ಪರವಾಗಿ ಇರುವ ಅಭ್ಯರ್ಥಿಗಳಿಗೆ ನಮ್ಮ ಸಂಘಟನೆಯ ಮೂಲಕ ಬೆಂಬಲ ನೀಡಲಾಗುವುದು. ನಮ್ಮ ಮುಂದಿನ ಉತ್ತಮ ಭವಿಷ್ಯಕ್ಕಾಗಿ ಜಾತಿ, ಧರ್ಮದ ತಾರತಮ್ಯ ಮಾಡದೇ ಎಲ್ಲರೂ ಒಂದೇ ತಾಯಿಯ ಮಕ್ಕಳಂತೆ ನೋಡುವ ಅಭ್ಯರ್ಥಿಗೆ ನಮ್ಮ ಬೆಂಬಲ ಇರುತ್ತದೆ ಎಂದರು.

ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ, ಕಾರ್ಯದರ್ಶಿ ಅಶೋಕ ಕುಸಬಿ, ಶಿವಾನಂದ ಶಿಗ್ಲಿ, ಮಂಜುನಾಥ ಶ್ರೀಗಿರಿ, ನಗೀನಾ ಎಲಿಗಾರ, ಪವಿತ್ರ ಸನದಿ, ಶಾರದಾ ಹೂಗಾರ, ಕುಸಮಾ ಪೂಜಾರ, ಮುಸ್ಕಾನ ಎಲಿಗಾರ, ಹುಲಿಗೆಮ್ಮ ಮಂಡಲಗೇರಿ, ಲಕ್ಷ್ಮವ್ವ ಬಾಗಲಕೋಟಿ, ಮಂಜವ್ವ ಮಂಡಲಗೇರಿ, ಗಂಗಾ ಲಮಾಣಿ, ಶಶಿಕಲಾ ಭೋವಿ, ಅನ್ನಪೂರ್ಣ ಮೇಟಿ, ಶಮಶಾದ ಸೊಲ್ಲಾಪೂರ, ಮುದಕವ್ವ ಪುರದ, ರೇಖಾ ಮಾಳಿಮನಿ, ಮಂಜುಳಾ ಉಮಚಗಿ, ರೇಣುಕಾ ಉಮಚಗಿ, ರಜೀಯಾ ಮುಳಗುಂದ ಹಾಗೂ ಆಕಾಶನಗರ ಸ್ಲಂ ನಿವಾಸಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ನೇಹಾ ಹತ್ಯೆ ಖಂಡಿಸಿ ರಾಜ್ಯಪಾಲರಿಗೆ ಮನವಿ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯಲ್ಲಿ ಶ್ರೀರಾಮ ಸೇನೆಯ ತಾಲೂಕಾ ಘಟಕದ ವತಿಯಿಂದ ರಾಜ್ಯದಲ್ಲಿ ಸಾಲು ಸಾಲು ಹಿಂದೂಗಳ ಮೇಲೆ ಬರ್ಬರ ಕೊಲೆ, ದಾಳಿ ಖಂಡಿಸಿ ಕುಸಿದು ಬಿದ್ದ ಕಾನೂನು ಸುವ್ಯವಸ್ಥೆಯನ್ನು ಖಂಡಿಸಿ, ರಾಜ್ಯದಲ್ಲಿ ರಾಷ್ಟ್ರಪತಿ ಆಡಳಿತಕ್ಕೆ ಆಗ್ರಹಿಸಿ ತಹಸೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕಾಧ್ಯಕ್ಷ ವಾಸುದೇವ ಜಾಧವ, ಹುಬ್ಬಳ್ಳಿಯಲ್ಲಿ ಬಿವಿಬಿ ವಿದ್ಯಾರ್ಥಿನಿ ನೇಹಾ ಹಿರೇಮಠ ಹಾಡುಹಗಲೇ ಫಯಾಜ್‌ನಿಂದ ಬರ್ಬರ ಹತ್ಯೆ, ದಾವಣಗೆರೆ ಜಿಲ್ಲೆ ನಲ್ಲೂರಿನಲ್ಲಿ ಕ್ಷುಲ್ಲಕ ಕಾರಣಕ್ಕೆ ಮುಸ್ಲಿಂರಿಂದ 3 ಹಿಂದೂಗಳ ಮೇಲೆ ಮಾರಣಾಂತಿಕ ಹಲ್ಲೆ, ಚಿತ್ರದುರ್ಗದಲ್ಲಿ ಸಹ ಉದ್ಯೋಗಿ ಹಿಂದೂ ಯುವಕ ಮುಸ್ಲಿಂ ಯುವತಿಗೆ ಡ್ರಾಪ್ ಕೊಟ್ಟಿದ್ದಕ್ಕೆ ಮುಸ್ಲಿಂ ಗೂಂಡಾಗಳಿಂದ ಹಿಗ್ಗಾಮುಗ್ಗಾ ಥಳಿತ, ಬೆಂಗಳೂರು ವಿದ್ಯಾರಣ್ಯಪುರದಲ್ಲಿ ಜೈಶ್ರೀರಾಮ ಘೋಷಣೆ ಕೂಗಿದ ಹಿಂದೂಗಳ ಮೇಲೆ ಮುಸ್ಲಿಂರಿಂದ ಆಕ್ರಮಣ, ಮೈಸೂರು, ಮತ್ತು ಬಾಗಲಕೋಟಿಯಲ್ಲೂ ಸಹ ಮುಸ್ಲಿಂರಿಂದ ದಾಳಿ ನಡೆಯುತ್ತಿದೆ. ಕೂಡಲೇ ಇಂತಹ ಕೃತ್ಯಗಳಿಗೆ ಕಡಿವಾಣ ಹಾಕುವಂತೆ ಮನವಿ ಸಲ್ಲಿಸಿದರು.

ಪವನ ಕುರಿ, ಸಂತೋಷ ಪರಬತ, ಮಾರುತಿ ಹಾದಿಮನಿ, ಜಗದೀಶ ಸಿಂಧೆ, ಪ್ರದೀಪ ಕಟ್ಟೇಕಾರ, ಬಸವರಾಜ ಹದ್ಲಿ ಮುಂತಾದವರು ಉಪಸ್ಥಿತರಿದ್ದರು.

## ಎಬಿವಿಪಿಯಿಂದ ಮತದಾನ ಜಾಗೃತಿ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಲಕ್ಷ್ಮೇಶ್ವರ ಶಾಖೆಯಿಂದ ಲಕ್ಷ್ಮೇಶ್ವರದ ಪ್ರಮುಖ ಸಾರ್ವಜನಿಕ ಸ್ಥಳಗಳಲ್ಲಿ ಮತದಾನ ಮಹತ್ವವನ್ನು ಸಾರ್ವಜನಿಕರಿಗೆ ತಿಳಿಸುವ ಕಾರ್ಯ ಮಾಡಲಾಯಿತು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್‌ನ ತಾಲೂಕಾ ಸಂಚಾಲಕ ಚಂದ್ರು ಕುಂದಗೋಳ ಮಾತನಾಡಿ, ಬರುವ ಲೋಕಸಭಾ ಚುನಾವಣೆಯಲ್ಲಿ ಯಾವುದೇ ಆಸೆ-ಆಮಿಷಗಳಿಗೊಳಗಾಗದೆ ಪ್ರಬುದ್ಧರಾಗಿ ಈ ದೇಶದ ಸುಭದ್ರತೆ, ಅಭಿವೃದ್ಧಿ ಮತ್ತು ನಿಸ್ವಾರ್ಥದಿಂದ ಸೇವೆ ಸಲ್ಲಿಸುವ ಸಮರ್ಥ ನಾಯಕನನ್ನು ಆರಿಸುವ ದೊಡ್ಡ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ಈ ನಿಟ್ಟಿನಲ್ಲಿ ಅತ್ಯಂತ ಎಚ್ಚರಿಕೆ, ಜವಾಬ್ದಾರಿತನದಿಂದ ಶ್ರೇಷ್ಠ ವ್ಯಕ್ತಿಗೆ ಮತದಾನ ಮಾಡೋಣ ಎಂದು ತಿಳಿಸಿ, ಎಬಿವಿಪಿಯಿಂದ ಪ್ರಕಟಗೊಂಡ ಮತದಾನ ಜಾಗೃತಿ ಭಿತ್ತಿ ಪತ್ರಗಳನ್ನು ಹಂಚಲಾಯಿತು.

ಈ ವೇಳೆ ಎಬಿವಿಪಿ ಕಾರ್ಯಕರ್ತರಾದ ಶರಣಪ್ಪ ಶಿವನಗೌಡ, ಸಾಗರ್ ಮೆಹರ್‌ವಾಡೆ, ಗಂಗಾಧರ ಸವಣೂರ, ಶರಣಪ್ಪ ಗಾಂಜಿ, ಸೋಮು ಭದ್ರಾಪುರ, ರಾಜಶೇಖರ ಅಕ್ಕೂರ ಮತ್ತಿತರರಿದ್ದರು.

ಶಿರಹಟ್ಟಿಯಲ್ಲಿ ಚುನಾವಣಾ ಪ್ರಚಾರ ಸಭೆ ನಡೆಸಿದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ

# ಬಿಜೆಪಿಯಿಂದ ಜನಕಲ್ಯಾಣದ ಕೆಲಸ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ಬಿಜೆಪಿ ಸರಕಾರ ಜಾರಿಗೆ ತಂದಿದ್ದ ಕಿಸಾನ್ ಸಮ್ಮಾನ, ರೈತರ ಮಕ್ಕಳಿಗೆ ನೀಡುತ್ತಿದ್ದ ವಿದ್ಯಾನಿಧಿ, ರೈತ ಶಕ್ತಿ ಯೋಜನೆ, ಮಹಿಳಾ ಸ್ವ-ಸಹಾಯ ಸಂಘಗಳಿಗೆ ನೀಡುತ್ತಿದ್ದ 5 ಲಕ್ಷ ರೂ, ಸ್ವಾಮಿ ವಿವೇಕಾನಂದ ಯೋಜನೆ ಅಡಿ ನೀಡುತ್ತಿದ್ದ ಸಹಾಯಧನ ನಿಲ್ಲಿಸಿದೆ. ರೈತರಿಗೆ, ಯುವಕರಿಗೆ, ಮಹಿಳೆಯರಿಗೆ ಮತ್ತು ರೈತ ಮಕ್ಕಳಿಗೆ ಕಾಂಗ್ರೆಸ್ ಪಕ್ಷ ಚೊಂಬು ನೀಡಿದೆ ಎಂದು ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಕಾಂಗ್ರೆಸ್ ಪಕ್ಷದ ವಿರುದ್ಧ ಹರಿಹಾಯ್ದರು.

ಅವರು ಮಂಗಳವಾರ ಶಿರಹಟ್ಟಿಯಲ್ಲಿ ಚುನಾವಣಾ ಪ್ರಚಾರದ ಸಭೆಯಲ್ಲಿ ಮಾತನಾಡಿ,



ಬಿಜೆಪಿ ಸರಕಾರ ಜನತೆಗೆ ಭದ್ರತೆ ಮತ್ತು ಸುರಕ್ಷೆ ನೀಡಿದೆ. ಆದರೆ ಕಾಂಗ್ರೆಸ್ ಪಕ್ಷ ಬೋಗಸ್ ಗ್ಯಾರಂಟಿ ಕಾರ್ಡ್ ನೀಡುತ್ತಿದೆ. ಜವಾಬ್ದಾರಿ ಇಲ್ಲದ ಪಕ್ಷ ಇದಾಗಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಜನತೆಯ ಆರೋಗ್ಯದ ದೃಷ್ಟಿಯಿಂದ ಆಯುಷ್ಮಾನ್, ಜನೌಷಧಿ ಕೇಂದ್ರದಂತಹ ಜನಕಲ್ಯಾಣದ ಕೆಲಸ ಮಾಡಿದ್ದಾರೆ. ಜಲಜೀವನ ಮಿಷನ್ ಮೂಲಕ ಮನೆ ಮನೆಗೆ ನೀರು ಪೂರೈಸಿದ್ದಾರೆ. ಜೊತೆ-ಗೆ 5 ಕೆಜಿ ಅಕ್ಕಿ ಉಚಿತವಾಗಿ ನೀಡುತ್ತಿದ್ದಾರೆ. ಮತ್ತೊಮ್ಮೆ ಮೋದಿ ಅವರು ಪ್ರಧಾನಿ ಆಗುವುದಕ್ಕೆ ನೀವೆಲ್ಲರೂ ಬಿಜೆಪಿ ಪಕ್ಷಕ್ಕೆ ಮತ ನೀಡಿ ನಿಮ್ಮ ಮತ ವ್ಯರ್ಥವಾಗದ ರೀತಿಯಲ್ಲಿ ನಿಮ್ಮ ಧ್ವನಿಯಾಗಿ ಕೆಲಸ ಮಾಡುತ್ತೇನೆ ಎಂದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಮೇ. 7ರಂದು ನಡೆಯಲಿರುವ ಲೋಕಸಭಾ ಚುನಾವಣೆಯ ಮತದಾನದಲ್ಲಿ ಬೊಮ್ಮಾಯಿಯವರಿಗೆ ನಿಮ್ಮ ಮತ ನೀಡುವುದರ ಮೂಲಕ ಅವರನ್ನು ಅತ್ಯಧಿಕ ಮತಗಳ ಅಂತರದಿಂದ ಗೆಲ್ಲಿಸಿಕೊಡಬೇಕು. ಅವರು ಈ ಹಿಂದೆ ಶಿರಹಟ್ಟಿ ಮತಕ್ಷೇತ್ರಕ್ಕೆ ಬಸ್ ಘಟಕ, 100 ಹಾಸಿಗೆಗಳ ಆಸ್ಪತ್ರೆ, ರಸ್ತೆ ಕಾಮಗಾರಿ ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ನೀಡಿದ್ದಾರೆ. ಮುಂಬರುವ ದಿನಗಳಲ್ಲಿ ಈ ಭಾಗದ ರೈತರಿಗೆ ಅನುಕೂಲವಾಗುವ ನೀರಾವರಿ ಯೋಜನೆಗಳನ್ನು ಸಹ ನೆರವೇರಿಸಲು ಅವರಿಗೆ ಮನವಿ ಮಾಡಿಕೊಳ್ಳಲಾಗಿದೆ ಎಂದರು.

ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಜಿ.ಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಸುನೀಲ ಮಹಾಂತಶೆಟ್ಟರ, ನಾಗರಾಜ ಲಕ್ಕುಂಡಿ, ಸಿ.ಸಿ. ನೂರಶೆಟ್ಟರ, ಫಕ್ಕೀರೇಶ ರಟ್ಟಿಹಳ್ಳಿ, ನಂದಾ ಪಲ್ಲೇದ, ಸುರೇಶ ಅಕ್ಕಿ, ಯಲ್ಲಪ್ಪ ಇಂಗಳಗಿ, ವೀರಣ್ಣ ಅಂಗಡಿ, ಪರಶುರಾಮ ಡೊಂಕಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

ಶಾಸಕ ಡಾ. ಚಂದ್ರು ಲಮಾಣಿ ಕ್ರಿಯಾಶೀಲ ಶಾಸಕರಾಗಿದ್ದಾರೆ. ಶಿರಹಟ್ಟಿ ಪಟ್ಟಣಕ್ಕೆ ನಮ್ಮ ಅವಧಿಯಲ್ಲಿ ತಾಲೂಕಾ ಆಸ್ಪತ್ರೆ ನಿರ್ಮಾಣಕ್ಕೆ ಅನುದಾನ ಮೀಸಲಿಟ್ಟಿದ್ದೇವೆ. ಅದಕ್ಕೆ ಕಾಂಗ್ರೆಸ್‌ನವರು ಅಡ್ಡಿಪಡಿಸಿದರೂ ಸಹ ಹೋರಾಟ ಮಾಡಿ ಅದನ್ನು ಮತ್ತರ ಪಡೆದು ಆಸ್ಪತ್ರೆ ನಿರ್ಮಿಸುವುದಕ್ಕೆ ಸನ್ನದ್ಧರಾಗಿದ್ದಾರೆ. ಇವರಿಗೂ ಸಹ ಸಹಕಾರ ನೀಡಬೇಕೆಂದು ಬಸವರಾಜ ಬೊಮ್ಮಾಯಿ ವಿನಂತಿಸಿದರು.

## ಬಳಿಗಾರ ಕುಟುಂಬದಿಂದ ದತ್ತಿನಿಧಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಶಿಗ್ಲಿ ಗ್ರಾಮದ ನಾಡೋಜ ಡಾ.ಮನು ಬಳಿಗಾರ, ಡಾ. ಎಸ್.ಪಿ. ಬಳಿಗಾರ ಇವರು ತಮ್ಮ ಬಳಿಗಾರ ಕುಟುಂಬದಿಂದ ತಾಯಿ ಶಂಕರಮ್ಮ ಪರಮೇಶ್ವರಪ್ಪ ಬಳಿಗಾರ ಅವರ ಹೆಸರಿನಲ್ಲಿ ಕೊಡಮಾಡಿದ ದತ್ತಿನಿಧಿಯ 5 ಲಕ್ಷ ರೂ ಚೆಕ್‌ನ್ನು ಕರ್ನಾಟಕ ಲೇಖಕಿಯರ ಸಂಘದ ಅಧ್ಯಕ್ಷೆ ಡಾ. ಎಚ್.ಎಲ್. ಪುಷ್ಪಾ ಅವರಿಗೆ ಸಲ್ಲಿಸಲಾಯಿತು.

ಈ ಕುರಿತು ಮಾತನಾಡಿದ ಎಸ್.ಪಿ. ಬಳಿಗಾರ, ಈ ದತ್ತಿನಿಧಿಯಿಂದ ಬರುವ ಬಡ್ಡಿ ಹಣದಲ್ಲಿ ಗದ್ಯ ಸಾಹಿತ್ಯ, ಕಾವ್ಯ ಪ್ರಕಾರ ಮತ್ತು ಸಮಾಜ ಸೇವೆ ಈ ಮೂರು ಕ್ಷೇತ್ರಗಳಲ್ಲಿ ಸಲ್ಲಿಸಿದ ಸೇವೆಗೆ ಪ್ರಶಸ್ತಿಯನ್ನು ಪ್ರತಿವರ್ಷದ ಕಾರ್ಯಕ್ರಮದ ವೇಳೆ ಕೊಡಲು ಬಳಿಗಾರ ಕುಟುಂಬ ಅಪೇಕ್ಷಿಸಿದೆ. ಅನ್ನ, ಆಶ್ರಯ, ಅಕ್ಷರ ಎಲ್ಲವನ್ನೂ ನೀಡಿ ಸುಂದರ ಬದುಕು ಕಟ್ಟಿಕೊಳ್ಳಲು ಆಸರೆಯಾದ ಕನ್ನಡ ಸಾರಸ್ವತ ಲೋಕಕ್ಕೆ ಅಳಿಲು ಸೇವೆ ಮಾಡಬೇಕೆಂಬ ಉದ್ದೇಶದಿಂದ ಬಳಿಗಾರ ಕುಟುಂಬದಿಂದ ತಾಯಿಯವರ ಹೆಸರಿನಲ್ಲಿ ದತ್ತಿ ನೀಡಲಾಗಿದೆ. ನಾವು ಪಡೆದಿದ್ದರಲ್ಲಿ ಸ್ವಲ್ಪವನ್ನಾದರೂ ಸಮಾಜಕ್ಕೆ ಮರಳಿಸುವ ಮತ್ತು ಸಾಹಿತ್ಯ ಸೇವೆ ಮಾಡುವ ಮನಸ್ಥಿತಿಯನ್ನೂ ತಾಯಿ ಭುವನೇಶ್ವರಿ ನೀಡಿದ್ದಾಳೆ ಎಂದರು.

### ಮತದಾನ ಜಾಗೃತಿ ಮೂಲಕ ವಿಶಿಷ್ಟವಾಗಿ ಪಂಚಾಯತ್ ರಾಜ್ ದಿವಸ ಆಚರಣೆ

# ರೋಸ್ ತಗೊಳ್ಳಿ, ಕಡ್ಡಾಯ ಮತದಾನ ಮಾಡಿ

■ವಿಜಯಸಾಕ್ಷಿ ಸುದ್ದಿ, ನರಗುಂದ

ತಾಲೂಕು ಪಂಚಾಯಿತಿ ಮತ್ತು ತಾಲೂಕು ಸ್ವೀಪ್ ಸಮಿತಿ ವತಿಯಿಂದ ನಗರದ ಸಾರ್ವಜನಿಕರ ಸ್ಥಳಗಳಾದ ಬಸ್ ನಿಲ್ದಾಣ ಹಾಗೂ ಆಟೋ ರಿಕ್ಷಾ ನಿಲ್ದಾಣಗಳಲ್ಲಿನ ಸಾರ್ವಜನಿಕರಿಗೆ ಕಡ್ಡಾಯ ಮತದಾನ ಜಾಗೃತಿ ಮೂಡಿಸಲಾಯಿತು. ಬಸ್ ನಿಲ್ದಾಣದಲ್ಲಿನ ಮತದಾರರನ್ನು ಭೇಟಿಯಾಗಿ, ಕೈಗೆ ರೆಡ್ ರೋಸ್ ನೀಡುವುದರ ಮೂಲಕ ಮೇ.7ರಂದು ಕಡ್ಡಾಯವಾಗಿ ಮತದಾನ ಮಾಡಿ ಎಂದು ತಾ.ಪಂ ಅಧಿಕಾರಿಗಳು ಮನವಿ ಮಾಡಿದರು.





ತಾ.ಪಂ ಇ.ಓ ಮತ್ತು ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷ ಸೋಮಶೇಖರ್ ಬಿರಾದಾರ ಮಾತನಾಡಿ, ಪಂಚಾಯತ್ ರಾಜ್ ದಿವಸ್ ಅಂಗವಾಗಿ ಇಂದು ಸಾರ್ವಜನಿಕರ ಸ್ಥಳಗಳಲ್ಲಿ ಕಡ್ಡಾಯ ಮತದಾನ ಜಾಗೃತಿ ಮೂಡಿಸುವ ಕೆಲಸವಾಗುತ್ತಿದೆ. ಲೋಕಸಭೆ ಚುನಾವಣೆಯ ಮತದಾನದ ವೇಳೆ ನಿಮ್ಮ ನಿಮ್ಮ ಗ್ರಾಮಗಳಲ್ಲಿ ಕಡ್ಡಾಯವಾಗಿ ಎಲ್ಲರೂ ಮತ ಚಲಾಯಿಸಬೇಕೆಂದರು. ದೂರದ ಊರುಗಳಿಗೆ ತೆರಳುವ ಪ್ರಯಾಣಿಕರು ಮೇ-7ರ ಮತದಾನ ದಿನವನ್ನು ನೆನಪಿಟ್ಟುಕೊಳ್ಳಬೇಕು. ಎಲ್ಲೇ ಇದ್ದರೂ ಆ ದಿನ ಊರಿಗೆ ಬಂದು ಮತ ಚಲಾಯಿಸಬೇಕು ಎಂದರು.

ಗ್ರಾಮೀಣ ಉದ್ಯೋಗ ಸಹಾಯಕ ನಿರ್ದೇಶಕ ಸಂತೋಷಕುಮಾರ್ ಪಾಟೀಲ್ ಮಾತನಾಡಿ, ಆಟೋ ರಿಕ್ಷಾ ಮೂಲಕ ಪ್ರಯಾಣಿಕರು ಪ್ರತಿನಿತ್ಯ ಸಂಚಾರ ಮಾಡುತ್ತಾರೆ. ಆಟೋ ರಿಕ್ಷಾ ಚಲಾಯಿಸುವವರು ತಮ್ಮ ರಿಕ್ಷಾದಲ್ಲಿ ಪ್ರಯಾಣಿಸುವ ಪ್ರಯಾಣಿಕರಿಗೆ ಕಡ್ಡಾಯವಾಗಿ ಮತದಾನ ಮಾಡಲು ತಿಳಿಹೇಳಬೇಕು. ಈ ಮೂಲಕ ದೇಶದ ಚುನಾವಣೆಯ ಕಡ್ಡಾಯ ಮತದಾನ ಜಾಗೃತಿ ಅಭಿಯಾನದಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದರು.

ಈ ಸಂದರ್ಭದಲ್ಲಿ ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಆನಂದ ಭೋವಿ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕರಾದ ಕೃಷ್ಣಮ್ಮ ಹಾದಿಮನಿ, ತಾಲೂಕಿನ ಗ್ರಾಮ ಪಂಚಾಯತಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ತಾಲೂಕಿನ ನರೇಗಾ ಸಿಬ್ಬಂದಿ ವರ್ಗ, ಬಸ್ ನಿಲ್ದಾಣದ ವ್ಯವಸ್ಥಾಪಕರು, ಸಾರಿಗೆ ಇಲಾಖೆ ಸಿಬ್ಬಂದಿ, ತಾಲೂಕು ಪಂಚಾಯತ ಸಿಬ್ಬಂದಿ ವರ್ಗದವರು ಹಾಜರಿದ್ದರು.

ನಗರದ ಬಸ್ ನಿಲ್ದಾಣದ ಮೂಲಕ ಬೇರೆ ಬೇರೆ ಗ್ರಾಮಗಳಿಗೆ, ಜಿಲ್ಲೆಗಳಿಗೆ, ರಾಜ್ಯಗಳಿಗೆ ಸಂಚರಿಸುವ ಪ್ರಯಾಣಿಕರ ಕೈಗೆ ರೆಡ್ ರೋಸ್ ನೀಡಿ ಮತದಾನ ಮಾಡುವ ಸಂಕಲ್ಪ ಮಾಡೋಣ ಎಂದು ಅಧಿಕಾರಿ ವರ್ಗ ಮತದಾನ ಅರಿವು ಮೂಡಿಸಿದರು. ಅಲ್ಲದೆ ನಿಲ್ದಾಣದ ಆಟೋ ರಿಕ್ಷಾ ಸವಾರರನ್ನು ಭೇಟಿಯಾಗಿ ಅವರಿಗೆ ರೋಸ್ ನೀಡಿ ಕಡ್ಡಾಯ ಮತದಾನ ಜಾಗೃತಿ ಅಭಿಯಾನದಲ್ಲಿ ಭಾಗಿಯಾಗಿ ಮತದಾನ ಮಾಡಿ ಮತ್ತು ಪ್ರಯಾಣಿಕರಿಗೆ ಮತದಾನ ಮಾಡುವಂತೆ ತಿಳಿಹೇಳಿ ಎಂದು ಮಾಹಿತಿ ನೀಡಲಾಯಿತು.

## ಅಕ್ಕಮಹಾದೇವಿ ಪರಮ ವೈರಾಗ್ಯ ಮೂರ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಕ್ಕಮಹಾದೇವಿ ವಚನಗಳ ಅಂಶಗಳು ಸಾರ್ವಕಾಲಿಕ ಸತ್ಯ ಮತ್ತು ಕನ್ನಡ ಸಾರಸ್ವತ ಲೋಕದ ಆಧ್ಯಾತ್ಮಿಕ ಸಾಹಿತ್ಯದಲ್ಲಿ ಮಹತ್ತರ ಕೊಡುಗೆಗಳಾಗಿವೆ ಎಂದು ನಿವೃತ್ತ ಶಿಕ್ಷಕಿ, ಸಾಹಿತಿ ದೇವಕಿ ಕೊಡ್ಲಿವಾಡ ಹೇಳಿದರು.

ಅವರು ಮಂಗಳವಾರ ಪಟ್ಟಣದ ಅಕ್ಕಮಹಾದೇವಿ ದೇವಸ್ಥಾನದಲ್ಲಿ ಕದಳಿ ಮಹಿಳಾ ವೇದಿಕೆಯಿಂದ ಹಮ್ಮಿಕೊಂಡಿದ್ದದ ಅಕ್ಕಮಹಾದೇವಿ ಜಯಂತಿ ಆಚರಣೆ ವೇಳೆ ಮಾತನಾಡಿದರು.

ಸಾಮಾಜಿಕ ಸಮಾನತೆ, ಸ್ತ್ರೀಕುಲದ ಏಳಿಗೆಗಾಗಿ ಶ್ರಮಿಸಿದ ಅಕ್ಕಮಹಾದೇವಿ ಪರಮ ವೈರಾಗ್ಯ ಮೂರುತಿಯಾಗಿದ್ದರು. ಅಣ್ಣ ಬಸವಣ್ಣ, ಚನ್ನಬಸವಣ್ಣ, ಅಲ್ಲಮಪ್ರಭು ಸೇರಿದಂತೆ ಅನೇಕ ಶರಣ ಶ್ರೇಷ್ಠರ ಸಮಕಾಲೀನಳಾಗಿ, ಅವರೆಲ್ಲರ ಸಮಕ್ಕೆ ನಿಂತು ಶ್ರೇಷ್ಠ ವಚನಗಳನ್ನು ರಚಿಸಿದ ಕನ್ನಡದ ಪ್ರಥಮ ಕವಯಿತ್ರಿಯಾಗಿ ಅಕ್ಕಮಹಾದೇವಿಯ ಹೆಸರು ಸದಾ ಚಿರಸ್ಥಾಯಿಯಾಗಿದೆ. ಇಂತಹ ಶ್ರೇಷ್ಠ ಮಹಿಳೆಯನ್ನು ಸ್ಮರಿಸುವದು ಅಗತ್ಯವಾಗಿದೆ ಎಂದು ಹೇಳಿದರು.

ತಾಲೂಕಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ನಿರ್ಮಲಾ ಅರಳಿ ಮಾತನಾಡಿ, ಸಮಾಜದಲ್ಲಿ ಮಹಿಳೆಯರಿಗೂ ಪುರುಷರಷ್ಟೇ ಸಮಾನತೆ ಎಲ್ಲ ಕ್ಷೇತ್ರಗಳಲ್ಲಿ ಸಿಗಬೇಕು ಎಂದು 12ನೇ ಶತಮಾನದಲ್ಲಿಯೇ ಗಟ್ಟಿಯಾಗಿ ಬಿಂಬಿಸುವ ಕಾರ್ಯ ಮಾಡಿದ್ದಾರೆ. ಅಕ್ಕ ಮಹಾದೇವಿ ಮಹಿಳೆಯರ ಬದುಕಿನ ಆದರ್ಶವಾಗಿದ್ದಾರೆ ಎಂದರು.

ಈ ವೇಳೆ ಕದಳಿ ಮಹಿಳಾ ವೇದಿಕೆ ಕಾರ್ಯದರ್ಶಿ ರತ್ನಾ ಕರ್ಕಿ, ಪ್ರಿಯಾ ಕುಂಬಿ, ನಂದಾ ಧರ್ಮಾಯತ, ಲಕ್ಷ್ಮೀ ಕೆರಿಮನಿ, ವಿನುತಾ ಅರಳಿ, ಮಹಾನಂದ ಕೊಣ್ಣೂರ, ಶೋಭಾ ವಡಕಣ್ಣವರ, ಶಾಂತಾ ಅಬ್ಬಿಗೇರಿ, ಗೌರಮ್ಮ ಸಂಗಪಟ್ಟಶೆಟ್ಟರ, ವಿದ್ಯಾ ಗಾಂಜಿ, ಗೌರಮ್ಮ ಯಳಮಲಿ, ಶ್ವೇತಾ ಕೊಣ್ಣೂರ ಸೇರಿ ಹಲವರಿದ್ದರು.

## ಲಕ್ಷ್ಮೇಶ್ವರದಲ್ಲಿ ಬಿಜೆಪಿ ಅಭ್ಯರ್ಥಿ ಪರ ಪ್ರಚಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಅವರ ಪತ್ನಿ ಚನ್ನಮ್ಮ ಬಸವರಾಜ ಬೊಮ್ಮಾಯಿ ಲಕ್ಷ್ಮೇಶ್ವರ ಪಟ್ಟಣ ಸೇರಿ ತಾಲೂಕಿನ ಶಿಗ್ಲಿ, ದೊಡ್ಡೂರು ಗ್ರಾಮಗಳಲ್ಲಿ ಮನೆ ಮನೆಗೆ ತೆರಳಿ ಮತಯಾಚನೆ ಕಾರ್ಯ ಕೈಗೊಂಡರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ನಮ್ಮ ದೇಶದ ಪ್ರಧಾನಿಯಾಗಿರುವುದು ನಮ್ಮೆಲ್ಲರ ಪುಣ್ಯ. 10 ವರ್ಷಗಳಲ್ಲಿ ಭಾರತವನ್ನು ಜಗತ್ತಿನ ಅಗ್ರ ರಾಷ್ಟ್ರಗಳ ಸಾಲಿನಲ್ಲಿ ಸೇರುವಂತೆ ಮಾಡಿದ ಕೀರ್ತಿ ಮೋದಿಯವರಿಗೆ ಸಲ್ಲುತ್ತದೆ. ಕೇಂದ್ರ ಸರ್ಕಾರ ಮಹಿಳೆಯರಿಗಾಗಿ ಉಜ್ವಲ ಯೋಜನೆ, ಸುಕನ್ಯಾ ಸಮೃದ್ಧಿ ಯೋಜನೆ ಸೇರಿದಂತೆ ಹಲವಾರು ಜನಪರ ಯೋಜನೆಗಳನ್ನು ಜಾರಿಗೊಳಿಸಿದೆ. ಪ್ರತಿಯೊಬ್ಬರೂ ಕೇಂದ್ರದಲ್ಲಿ ಬಿಜೆಪಿ ಪಕ್ಷ ಆಡಳಿತಕ್ಕೆ ತರಲು ಬಿಜೆಪಿ ಅಭ್ಯರ್ಥಿಗೆ ಮತ ನೀಡುವ ಮೂಲಕ ನರೇಂದ್ರ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿಸೋಣ ಎಂದರು.

ಗದಗ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅಶ್ವಿನಿ ಅಂಕಲಕೋಟಿ ಮಾತನಾಡಿದರು. ಬಿಂದು ಬೊಮ್ಮಾಯಿ, ರಾಜ್ಯ ಮಹಿಳಾ ಮೋರ್ಚಾ ಪ್ರಧಾನ ಕಾರ್ಯದರ್ಶಿ ಡಾ.ಶೋಭಾ ನಿಸಿಂಮಗೌಡ್ರು, ಸರೋಜಾ ಚಂದ್ರು ಲಮಾಣಿ, ಶಕುಂತಲಾ ಅಳಗವಾಡಿ, ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನಿರ್ಮಲಾ ಕೊಳ್ಳಿ, ರತ್ನ ಕುರಗೋಡ, ವಂದನಾ ವೆರ್ಣೇಕರ, ಅಶ್ವಿನಿ ಜಗತಾಪ, ವಿಜಯಲಕ್ಷ್ಮೀ ಮಾನ್ವಿ, ನಂದಾ ಪಲ್ಲೇದ, ಪುರಸಭೆ ಸದಸ್ಯರಾದ ಯಲ್ಲವ್ವ ದುರ್ಗಣ್ಣವರ, ನೀಲವ್ವ ಮೆಣಸಿನಕಾಯಿ, ಶೋಭಾ ಮೆಣಸಿನಕಾಯಿ, ವಾಣಿ ಹತ್ತಿ, ಲಲಿತಾ ಶಿಗ್ಲಿಮಠ ಸವಿತಾ ಪಾಟೀಲ ಸೇರಿ ಪಕ್ಷದ ಮಹಿಳಾ ಪ್ರಮುಖರು, ಕಾರ್ಯಕರ್ತರು ಹಾಜರಿದ್ದರು.

## ವಿಜೃಂಭಣೆಯ ಕಾಲಕಾಲೇಶ್ವರ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಮೀಪದ ಸುಕ್ಷೇತ್ರ ಕಾಲಕಾಲೇಶ್ವರ ದೇವರ ಜಾತ್ರಾ ಮಹೋತ್ಸವದ ಪ್ರಯುಕ್ತ ಮಂಗಳವಾರ ಸಂಜೆ ಸಕಲ ವ್ಯಾದ ವೈಭವಗಳೊಂದಿಗೆ, ಅಸಂಖ್ಯಾತ ಸದ್ಭಕ್ತರ ಮಧ್ಯೆ ರಥೋತ್ಸವವು ವಿಜೃಂಭಣೆಯಿಂದ ಜರುಗಿತು.

ದವನದ ಹುಣ್ಣಿಮೆ ದಿನದಂದು ವಿಶೇಷ ಪೂಜೆಯೊಂದಿಗೆ ಉತ್ಸವ ಮೂರ್ತಿಗೆ ದವನಾರ್ಪಣೆ, ತೆಂಗಿನ ಕಾಯಿ, ಉತ್ತತ್ತಿ, ಬಾಳೆಹಣ್ಣು, ಕಬ್ಬು ದವಸ-ಧಾನ್ಯ ಸಮರ್ಪಿಸಿದ ನಂತರ ಪಲ್ಲಕ್ಕಿ ಸೇವೆ ಹಾಗೂ ದುರ್ಗಾದೇವಿಯ ವಿಶೇಷ ಪೂಜೆಯೊಂದಿಗೆ ರಥದಲ್ಲಿ ಸ್ವಾಮಿಯ ಉತ್ಸವ ಮೂರ್ತಿಯನ್ನು ಪ್ರತಿಷ್ಠಾಪಿಸಿ, ನಕ್ಷತ್ರ ದರ್ಶನದೊಂದಿಗೆ ಮಹಾರಥೋತ್ಸವಕ್ಕೆ ಚಾಲನೆ ನೀಡಲಾಯಿತು.

ಕಾಲಕಾಲೇಶ್ವರ ರಥೋತ್ಸವ ಹಿನ್ನೆಲೆಯಲ್ಲಿ ಬೆಳಿಗ್ಗೆ ಹಾಗೂ ಮಧ್ಯಾಹ್ನದ ಸುಡು ಬಿಸಿಲನ್ನೂ ಲೆಕ್ಕಿಸಿದೆ ಪಾದಾಯಾತ್ರೆ ಮೂಲಕ ಆಗಮಿಸುತ್ತಿದ್ದ ಭಕ್ತರಿಗೆ ರಸ್ತೆ ಪಕ್ಕದ ಕೆಲ ಹೊಲದ ಮಾಲಿಕರು ಹಾಗೂ ಪಟ್ಟಣದ ವಿವಿಧ ಸಂಘ-ಸಂಸ್ಥೆಗಳಿಂದ ಆರಂಭಿಸಿದ್ದ ನೀರಿನ ಅರವಟಿಗೆಗಳು ಭಕ್ತರ ನೀರಿನ ದಾಹವನ್ನು ನೀಗಿಸಿದ್ದು ವಿಶೇಷವಾಗಿತ್ತು. ರಾಜ್ಯದ ವಿವಿಧ ಭಾಗಗಳಿಂದ ಹರಿದು ಬಂದ ಭಕ್ತರು ಎತ್ತಿನ ಚಕ್ಕಡಿ, ಟಂಟಂ, ಲಾರಿ ಇತ್ಯಾದಿ ವಾಹನಗಳ ಮೂಲಕ ಆಗಮಿಸಿ, ಕಾಲಕಾಲೇಶ್ವರನ ದರ್ಶನ ಪಡೆದರು.

### ಬೀಚಿ ಬಳಗದಿಂದ ಬೀಚಿ ಜಯಂತಿ, ವಿಶ್ವ ಪುಸ್ತಕ ದಿನಾಚರಣೆ

## ನಗುವಿಗೆ ಜೀವ ಉಳಿಸುವ ಶಕ್ತಿಯಿದೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮನುಷ್ಯನಿಗೆ ಭಗವಂತನು ನಗುವೆಂಬ ಶಕ್ತಿಯನ್ನು ನೀಡಿದ್ದಾನೆ. ಈ ನಗು ಮನುಷ್ಯನ ಸಹಜ ಸೌಂದರ್ಯದ ಆಭರಣವಾಗಿದೆ. ನಗುವುದರಿಂದ ಆಯಾಸವೆಲ್ಲ ಪರಿಹಾರವಾಗುತ್ತದೆ. ನಗುವಿಗೆ ಬದುಕಿಸುವ ಶಕ್ತಿ ಇದೆ ಎಂದು ಗದಗನ ಕೆಎಸ್ಎಸ್ ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಎ.ಕೆ. ಪೂಜಾರ ಅಭಿಪ್ರಾಯಪಟ್ಟರು.

ಪಟ್ಟಣದ ಬೀಚಿ ಬಳಗವು ಇಲ್ಲಿನ ಹಿರೇಮಠದ ಸಭಾ ಭವನದಲ್ಲಿ ಏರ್ಪಡಿಸಿದ್ದ ಬೀಚಿಯವರ 111ನೇ ಜಯಂತಿ ಮತ್ತು ವಿಶ್ವ ಪುಸ್ತಕ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಬೀಚಿ ಬದುಕು-ಬರೆಹ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಬೀಚಿ ಯಾರಿಂದಲೂ ಬೆಳೆದವರಲ್ಲ. ಅವರು ಸ್ವಯಂಭೂ. ತಮ್ಮಷ್ಟಕ್ಕೆ ತಾವೇ ತಮ್ಮನ್ನು ಸಿದ್ಧಪಡಿಸಿಕೊಂಡವರು ಬೀಚಿ. ಪ್ರಗತಿಶೀಲ ಸಾಹಿತ್ಯ ರಚನೆಯಲ್ಲಿ ಬೀಚಿ ಮುಂಚೂಣಿಯ ಬರೆಹಗಾರರಾಗಿದ್ದಾರೆ. ಎಲ್ಲರನ್ನೂ ನಗಿಸುವ ಮೂಲಕ, ಆ ನಗೆಯ ಗುಳಿಗೆಗಳನ್ನು ನೀಡುವ ಮೂಲಕ ಬೀಚಿ ಸಮಾಜದ ಸ್ವಾಸ್ಥ್ಯವನ್ನು ಕಾಪಾಡಿಕೊಂಡು ಬರುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಹೇಳಿದರು.




ಕಳೆದ ಹತ್ತು ವರ್ಷಗಳಿಂದ ನರೇಗಲ್ಲದಲ್ಲಿ ಬೀಚಿ ಬಳಗವನ್ನು ಹುಟ್ಟು ಹಾಕಿ ಅದನ್ನು ಸಮರ್ಥವಾಗಿ ನಡೆಸಿಕೊಂಡು ಬಂದಿರುವ ಬಳಗದ ಎಲ್ಲ ಸದಸ್ಯರೂ ಅಭಿನಂದನಾರ್ಹರು. ಸಾಹಿತ್ಯದ ರಸದೌತಣವನ್ನು ಈ ಭಾಗದ ಜನರಿಗೆ ಉಣಬಡಿಸುತ್ತಿರುವ ಬೀಚಿ ಬಳಗದ ಕಾರ್ಯ ಶ್ಲಾಘನೀಯ ಎಂದು ಡಾ. ಪೂಜಾರ ಬಣ್ಣಿಸಿದರು.

ವಿಶ್ವ ಪುಸ್ತಕ ದಿನಾಚರಣೆ ಕುರಿತು ಉಪನ್ಯಾಸಕ ನಾಗರಾಜ ಕಡ್ಲಬಾಳು ಮಾತನಾಡಿ, ಪುಸ್ತಕಗಳು ಮನಸ್ಸನ್ನು ಅರಳಿಸುತ್ತವೆ. ಮನಸ್ಸು ಅರಳಿಸುವಂತಹ ಪುಸ್ತಕಗಳನ್ನು ಓದಬೇಕೇ ಹೊರತು, ಮನಸ್ಸನ್ನು ಕೆರಳಿಸುವಂತಹ ಪುಸ್ತಕಗಳನ್ನು ಓದಬಾರದು ಎಂದರು.

ಸಮಾರಂಭದಲ್ಲಿ ಕರ್ನಾಟಕ ಸರಕಾರಿ ನೌಕರರ ಕ್ರೀಡಾಕೂಟದ ಈಜು ಸ್ಪರ್ಧೆಯಲ್ಲಿ ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಶಿಕ್ಷಕ ವಿ.ಎ. ಕುಂಬಾರ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ನಿಕಟಪೂರ್ವ ಅಧ್ಯಕ್ಷ ಸುರೇಶ ಹಳ್ಳಿಕೇರಿ ಇದ್ದರು. ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಅಧ್ಯಕ್ಷತೆ ವಹಿಸಿದ್ದರು. ಉಪನ್ಯಾಸಕ ಶಿವಾನಂದ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ, ಡಾ. ಆರ್.ಕೆ. ಗಚ್ಚಿನಮಠ, ಮುಖ್ಯ ಶಿಕ್ಷಕ ಬಿ.ಬಿ. ಕುರಿ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ ಸಿ.ಕೆ. ಕೇಸರಿ, ನಿವೃತ್ತ ಎಎಸ್ಐ ಶಿಸ್ತಾರ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ಜಿ.ಎ. ಬೆಲ್ಲದ, ಡಾ. ಎಲ್.ಎಸ್. ಗೌರಿ, ನಿವೃತ್ತ ಉಪನ್ಯಾಸಕ ಎಸ್.ಎಚ್. ಕುಲಕರ್ಣಿ, ಸಂಚಾಲಕ ಈಶ್ವರ ಬೆಟಗೇರಿ, ಕಾರ್ಯದರ್ಶಿ ಎಚ್.ವಿ. ಈಟಿ, ಪತ್ರಕರ್ತ ಸಂಗಮೇಶ ಮೆಣಸಿಗಿ, ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿ, ವೀರೇಶ ಕುಷ್ಟಗಿ, ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ, ಲಲಿತಾ ಕಳಕಣ್ಣವರ ಮುಂತಾದವರಿದ್ದರು. ಉಪನ್ಯಾಸಕ ಸಿ.ಎಸ್. ಗುಳಗಣ್ಣವರ ನಿರೂಪಿಸಿದರು. ಶಿಕ್ಷಕ ಜಿ.ಎ. ಪಾಟೀಲ ಸ್ವಾಗತಿಸಿದರು. ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ. ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ದೈಹಿಕ ಶಿಕ್ಷಕ ಆರ್.ಎಸ್. ನರೇಗಲ್ಲ ವಂದಿಸಿದರು.

## ಎ. 26ರಿಂದ ಮನೆ ಮನೆಗೆ ತೆರಳಿ ಮತದಾನ ಕಾರ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಚುನಾವಣೆ ಸಂಬಂಧ ಗದಗ ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ ವಿಶೇಷ ಚೇತನ ಮತದಾರರ ಪೈಕಿ 12 ಡಿ ಮುಖಾಂತರ ಅರ್ಜಿ ಸಲ್ಲಿಸಿ ಮನೆಯಲ್ಲಿಯೇ ಮತದಾನ ಮಾಡಲು ಆಯ್ಕೆ ಮಾಡಿದ ಮತದಾರರಿಗೆ ಎಪ್ರಿಲ್ 26 ರಿಂದ 28 ರ ವರೆಗೆ ಮನೆ ಮನೆಗೆ ತೆರಳಿ ಮತದಾನ ಕಾರ್ಯ ಕೈಗೊಳ್ಳಲಿದ್ದಾರೆ. ಆದ್ದರಿಂದ ಈಗಾಗಲೇ ಅರ್ಜಿ ಸಲ್ಲಿಸಿರುವ ಮತದಾರರು ಈ ದಿನಗಳಲ್ಲಿ ತಾವು ನೀಡಿದ ವಿಳಾಸದ ಮನೆಯಲ್ಲಿಯೇ ಹಾಜರಿದ್ದು, ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕೋರಿದ್ದಾರೆ.

## ರಾಯರ ಸಂಕಲ್ಪದಂತೆ ಕಿರಟಗೇರಿ ಸುಕ್ಷೇತ್ರವಾಗಲಿದೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಿರಟಗೇರಿ ಗ್ರಾಮಸ್ಥರ ಹಾಗೂ ರಾಘವೇಂದ್ರ ಸ್ವಾಮಿಗಳ ಭಕ್ತರ ಸದಿಚ್ಛೆಯಂತೆ ಗದಗ ತಾಲೂಕಿನ ಕಿರಟಗೇರಿ ಗ್ರಾಮ ಪವಾಡದ ಕ್ಷೇತ್ರವಾಗಿ ಹೊರಹೊಮ್ಮಲಿದೆ ಎಂದು ಮಂತ್ರಾಲಯದ ಪೀಠಾಧಿಪತಿಗಳಾದ 108 ಶ್ರೀ ಸುಭುದೇಂದ್ರ ಶ್ರೀಗಳು ಕಿರಟಗೇರಿ ಗ್ರಾಮದಿಂದ ಆಗಮಿಸಿದ್ದ ಭಕ್ತರಿಗೆ ಶ್ರೀಮಠದ ಸಂಕಲ್ಪ ತಿಳಿಸಿದರು.

ಹಲವಾರು ವರ್ಷಗಳಿಂದ ಈ ಕ್ಷೇತ್ರವನ್ನು ಸುಕ್ಷೇತ್ರ ಮಾಡುವ ಉದ್ದೇಶ ಹೊಂದಿದ ಭಕ್ತರು 400 ವರ್ಷಗಳ ಹಿಂದೆ ಗುರುಸಾರ್ವಭೌಮ ರಾಘವೇಂದ್ರ ಸ್ವಾಮಿಗಳು ಕಿರಟಗೇರಿ ಗ್ರಾಮಕ್ಕೆ ಆಗಮಿಸಿ, ದೇಸಾಯಿ ಮನೆತನದ ಮಗು ಅಪಮೃತ್ಯುವಿಗೆ ಈಡಾದ ಸಂದರ್ಭದಲ್ಲಿ ಶ್ರೀಗಳು ಮಂತ್ರಾಕ್ಷತೆ ಮೂಲಕ ಮಗುವಿಗೆ ಪುನರ್ಜನ್ಮ ನೀಡಿದ ಘಟನೆಯನ್ನು ಸ್ಮರಿಸುತ್ತಿದ್ದರು. ವೆಂಕಣ್ಣ ದೇಸಾಯಿಯವರು ತಮಗೆ ಆದ ಸಂತೋಷಕ್ಕೆ ಕಿರಟಗೇರಿ ಗ್ರಾಮವನ್ನು ಮಂತ್ರಾಲಯ ರಾಘವೇಂದ್ರ ಸ್ವಾಮಿಗಳಿಗೆ ಉಂಬಳಿ (ಭಕ್ಷೀಸ) ನೀಡಿದ್ದನ್ನು ನೆನೆಪಿಸುತ್ತಾ, ಮಂತ್ರಾಲಯಕ್ಕೆ ಭೇಟಿ ನೀಡಿದ ಭಕ್ತರು ಶ್ರೀಗಳಿಗೆ ಇಲ್ಲಿ ಸಹ ಜಾಗೃತ ಕ್ಷೇತ್ರ ಮಾಡಲು ಮನವಿ ಮಾಡಿಕೊಂಡಿದ್ದರು. ಈ ಬಗ್ಗೆ ಆಸಕ್ತಿ ವಹಿಸಿದ್ದ ಸುಭುದೇಂದ್ರ ತೀರ್ಥರು ಕಿರಟಗೇರಿ ಗ್ರಾಮಕ್ಕೆ ಆಗಮಿಸಿ, ಗುರು ರಾಘವೇಂದ್ರ ಸ್ವಾಮಿಗಳ ಪಾದಸ್ಪರ್ಶವಾದ ಈ ಕ್ಷೇತ್ರವನ್ನು ಸುಕ್ಷೇತ್ರ ಮಾಡುವ ಸಂಕಲ್ಪದೊಂದಿಗೆ ಆಶೀರ್ವದಿಸಿದ್ದರು.

ಕಿರಟಗೇರಿ ಗ್ರಾಮದ ಮಹೇಶಗೌಡ ಪಾಟೀಲ, ಶಿವಕುಮಾರಗೌಡ ಪಾಟೀಲ, ಕಲ್ಮೇಶ್ವರಯ್ಯ ಹಿರೇಮಠ, ಶ್ರೀನಿವಾಸ ಹುಬ್ಬಳ್ಳಿ ಮುಂತಾದವರಿದ್ದರು.

ಇನ್ನು ಕೆಲವೇ ದಿನಗಳಲ್ಲಿ ಕಿರಟಗೇರಿ ಸುಕ್ಷೇತ್ರಕ್ಕೆ ಆಗಮಿಸಿ, ಶೀಘ್ರದಲ್ಲಿ ದೇಸಾಯಿ ವಾಡೆಯಲ್ಲಿ ಮತ್ತೆ ಹೊಸರೂಪದೊಂದಿಗೆ ರಾಘವೇಂದ್ರ ಸ್ವಾಮಿಗಳ ಇಚ್ಛಾನುಸಾರ ಭಕ್ತರಿಗೆ ಸಕಲ ಕಷ್ಟ ಪರಿಹಾರಾರ್ಥವಾಗಿ ಪ್ರಾಣ ಪ್ರತಿಷ್ಠೆಯೊಂದಿಗೆ ಎಲ್ಲರ ಸಹಕಾರ ಪಡೆದು ಶ್ರೀಮಠದಿಂದ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಶ್ರೀಗಳು ಆಶೀರ್ವಾದ ಮೂಲಕ ತಿಳಿಸಿದರು.

### ಪುಲಿಗೆರೆ ಪೌರ್ಣಿಮೆಯ 29ನೇ ಕಾರ್ಯಕ್ರಮದಲ್ಲಿ ನಾಗಲಕ್ಷ್ಮೀ ರಾವ್ ಅಭಿಮತ

# ನಮ್ಮ ಸಂಸ್ಕೃತಿ ಮುಂದಿನ ಪೀಳಿಗೆಗೂ ಉಳಿಯಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಹಿತ್ಯ, ಕಲೆ, ಸಂಗೀತ, ಶಿಲ್ಪಕಲೆ, ಧಾರ್ಮಿಕ ಹೀಗೆ ವಿವಿಧ ಕ್ಷೇತ್ರಗಳಲ್ಲಿ ತನ್ನದೇ ಆದ ಸಾಂಸ್ಕೃತಿಕ ಹಿರಿಮೆ-ಗರಿಮೆಯನ್ನು ಪುಲಿಗೆರೆ(ಲಕ್ಷ್ಮೇಶ್ವರ) ಹೊಂದಿದೆ. ಈ ನಾಡಿನ ಇತಿಹಾಸ, ಸಂಸ್ಕೃತಿಗಳ ಅನಾವರಣ ಮುಂದಿನ ಪೀಳಿಗೆಗೆ ಉಳಿಯುವಂತಾಗಬೇಕು ಎಂದು ಬೆಂಗಳೂರಿನ ಭಾರತೀಯ ವಿದ್ಯಾಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ.ರಾವ್ ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಸೋಮೇಶ್ವರ ದೇವಸ್ಥಾನದಲ್ಲಿ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿ ತಿಂಗಳು ಹುಣ್ಣಿಮೆಯಂದು ನಡೆಯುವ ಪುಲಿಗೆರೆ ಪೌರ್ಣಿಮೆಯ 29ನೇ ಸಂಚಿಕೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಪುಲಿಗೆರೆ ಉತ್ಸವ ಕಾರ್ಯಕ್ರಮವು ಇನ್ಫೋಸಿಸ್ ಪ್ರತಿಷ್ಠಾನ ಕೊಡಮಾಡಿದ ಅತ್ಯಂತ ಶ್ರೇಷ್ಠ ಕೊಡುಗೆಯಾಗಿದೆ. ಭಾರತೀಯ ವಿದ್ಯಾ ಭವನವು ಈ ಕಾರ್ಯಕ್ರಮವನ್ನು ಅತ್ಯಂತ ಅಭಿಮಾನದಿಂದ ಕಳೆದ 7 ವರ್ಷಗಳಿಂದ ಆಯೋಜಿಸುತ್ತಾ ಬಂದಿದೆ. ಲಕ್ಷ್ಮೇಶ್ವರ ಹಾಗೂ ಸುತ್ತಮುತ್ತಲಿನ ಜನರ ಸಹಕಾರವನ್ನು ನಾವು ಹೃದಯಪೂರ್ವಕವಾಗಿ ನೆನೆಯುತ್ತೇವೆ ಎಂದರು.




ಇದೇ ಸಂದರ್ಭದಲ್ಲಿ ಪುಲಿಗೆರೆ ಉತ್ಸವಕ್ಕೆ ಶ್ರಮಿಸಿದ ಬೆಂಗಳೂರಿನ ಭಾರತೀಯ ವಿದ್ಯಾ ಭವನದ ಜಂಟಿ ನಿರ್ದೇಶಕಿ ನಾಗಲಕ್ಷ್ಮೀ ಕೆ. ರಾವ್ ಹಾಗೂ ಲೆಕ್ಕಪತ್ರ ಸಹಾಯಕ ಗೋವಿಂದ ಕುಲಕರ್ಣಿ ಸೇರಿದಂತೆ ಸೇವಾಕರ್ತರನ್ನು ಸನ್ಮಾನಿಸಲಾಯಿತು. ಟ್ರಸ್ಟ್ ಕಮಿಟಿಯ ಅಧ್ಯಕ್ಷ ಚಂಬಣ್ಣ ಬಾಳಿಕಾಯಿ ಅಧ್ಯಕ್ಷತೆ ವಹಿಸಿದ್ದರು. ಅರ್ಚಕರಾದ ಸೋಮಣ್ಣ ಪೂಜಾರ, ಮಲ್ಲೇಶಪ್ಪ ಕಣವಿ, ನೀಲಪ್ಪ ಕನವಳ್ಳಿ, ಸುರೇಶ ರಾಚನಾಯ್ಕರ, ಗೀತಾದೇವಿ ಮಾನ್ವಿ, ನೀಲಪ್ಪ ಕರ್ಜಕಣ್ಣವರ, ದೇವಣ್ಣ ಬಳಿಗಾರ, ಪಿ.ಬಿ. ಖರಾಟೆ, ಸಿ.ಜಿ. ಹಿರೇಮಠ, ಮಾಲಾದೇವಿ ದಂಧರಗಿ, ಶ್ರೀಮತಿ ಕಲಿವಾಳಮಠ, ಪಾರ್ವತಿ ಕಳ್ಳಿಮಠ, ಡಾ. ಹೂವಿನ, ಎನ್.ಆರ್. ಸಾತಪುತೆ, ಸಿದ್ದನಗೌಡ ಬಳ್ಳೊಳ್ಳಿಮ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ ಮುಂತಾದವರಿದ್ದರು. ರಾಕೇಶ್ ಆದಿ, ಸೋಮಶೇಖರ ಕೆರಿಮನಿ, ಜಿ.ಎಸ್. ಗುಡಿಗೇರಿ, ಚಂದ್ರು ನೇಕಾರ ನಿರೂಪಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಕಮಿಟಿಯ ಖಜಾಂಚಿ ಚನ್ನಪ್ಪ ಜಗಲಿ ಮಾತನಾಡಿ, ಗತ ಇತಿಹಾಸವನ್ನು ಉತ್ಸವಗಳ ಮೂಲಕ ಮೆಲುಕು ಹಾಕಬೇಕು. ಆ ಮೂಲಕ ನಮ್ಮ ಶ್ರೀಮಂತ ಪರಂಪರೆಯನ್ನು ಮುಂದಿನ ತಲೆಮಾರಿಗೆ ದಾಟಿಸುವ ಗುರುತರ ಜವಾಬ್ದಾರಿಯನ್ನು ನಿರ್ವಹಿಸಿದಂತಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ನಮ್ಮ ನಾಡಿನ ಹಿರಿಮೆ-ಗರಿಮೆಯನ್ನು ಉಳಿಸಿ ಬೆಳೆಸುವ ಕಾರ್ಯವನ್ನು ಪ್ರಾಮಾಣಿಕವಾಗಿ ಮಾಡೋಣ ಎಂದು ಹೇಳಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka